ಸಂಪುಟ : 10 ಸಂಚಿಕೆ: 224 ಪುಟ : 4+2 ಬೆಲೆ: 3.00 ಗುರುವಾರ ಅಕ್ಟೋಬರ್ 16 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 224 Pages : 4+2 Price : 3.00 Thursday October 16 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಹೊಯ್ಸಳ, ಕೆಳದಿ ಚೆನ್ನಮ್ಮ ಶೌರ್ಯ ಪ್ರಶಸ್ತಿ

■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ಸರಕಾರದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯವತಿಯಿಂದಮಕ್ಕಳದಿನಾಚರಣೆ-2025ರ ಪ್ರಯುಕ್ತ ತಮ್ಮ ಪ್ರಾಣದ ಹಂಗನ್ನು ತೊರೆದು ಹಾಗೂ ಸಮಯ ಪ್ರಜ್ಞೆಯಿಂದ ಇತರ ಪ್ರಾಣ ರಕ್ಷಣೆಗಾಗಿ ಧೈರ್ಯ, ಸಾಹಸ, ಪ್ರದರ್ಶಿಸಿದ 6ರಿಂದ 18 ವರ್ಷದೊಳಗಿನ ಬಾಲಕರಿಗೆ ಹೊಯ್ಸಳ ಮತ್ತು ಬಾಲಕಿಯರಿಗೆ ಕೆಳದಿ ಚೆನ್ನಮ್ಮ ಪ್ರಶಸ್ತಿಯನ್ನು ಪ್ರದಾನ ಮಾಡಲಾಗುತ್ತದೆ. ಪ್ರಕರಣವು 01.08.2024ರಿಂದ 31.07.2025ರೊಳಗೆ ನಡೆದಿರಬೇಕು. ಪ್ರಶಸ್ತಿಯು ತಲಾ 10 ಸಾವಿರ ರೂ.ಗಳ ನಗದು ಬಹುಮಾನ ಮತ್ತು ಪ್ರಶಸ್ತಿ ಪತ್ರ ಒಳಗೊಂಡಿರುತ್ತದೆ.

ಇದೇ ಸಂದರ್ಭದಲ್ಲಿ ಮಕ್ಕಳ ಕಲ್ಯಾಣ ಕ್ಷೇತ್ರದಲ್ಲಿ ಕನಿಷ್ಠ 5 ವರ್ಷಗಳ ಕಾಲ ಅತ್ಯುತ್ತಮ ಸೇವೆ ಸಲ್ಲಿಸಿರುವ ವ್ಯಕ್ತಿಗಳಿಗೆ ತಲಾ 25 ಸಾವಿರ ರೂ ನಗದು ಬಹುಮಾನ ಮತ್ತು ಪ್ರಶಸ್ತಿ ಪತ್ರ ಹಾಗೂ ಅತ್ಯುತ್ತಮ ಸೇವೆ ಸಲ್ಲಿಸಿರುವ ಸಂಸ್ಥೆಗಳಿಗೆ ತಲಾ 1 ಲಕ್ಷ ರೂ ನಗದು ಬಹುಮಾನ ಮತ್ತು ಪ್ರಶಸ್ತಿ ಪತ್ರವನ್ನು ನೀಡಿ ಗೌರವಿಸಲಾಗುವುದು.

ಮಕ್ಕಳದಿನಾಚರಣೆ-2025ನೇಸಾಲಿನಪ್ರಶಸ್ತಿಗಾಗಿ ನಿಗದಿಪಡಿಸಿರುವಅರ್ಜಿಗಳನ್ನುಪಡೆದು24.10.2025ರ ಒಳಗಾಗಿ ಉಪನಿರ್ದೇಶಕರ ಕಛೇರಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಗದಗ, ಕೊಠಡಿ ಸಂ-6, ಜಿಲ್ಲಾಡಳಿತ ಭವನ ಗದಗ (ದೂರವಾಣಿ ಸಂ.08372-220711) ಇಲ್ಲಿ ಕಛೇರಿ ಸಮಯದಲ್ಲಿ ಅರ್ಜಿಗಳನ್ನು ಕನ್ನಡ ಭಾಷೆಯಲ್ಲಿಯೇ ಸಲ್ಲಿಸತಕ್ಕದ್ದು ಎಂದು ಪ್ರಕಟಣೆ ತಿಳಿಸಿದೆ.

### ಗ್ರಾಮಸ್ಥರ ಸಮಸ್ಯೆ ಆಲಿಸುತ್ತಿರುವ ಪೊಲೀಸ್ ತಂಡ । ಜನಸಾಮಾನ್ಯರಲ್ಲಿ ಹೊಸ ಭರವಸೆ

# ಮನೆ-ಮನೆಗೆ ಪೊಲೀಸ್ ಬೀಟ್

■ವಿಜಯಸಾಕ್ಷಿ ಸುದ್ದಿ, ಡಂಬಳ

ಪೊಲೀಸ್ ವ್ಯವಸ್ಥೆಯಲ್ಲಿ ಅನುಪಮ ಬದಲಾವಣೆಯ ಮೂಲಕ ಗ್ರಾಮಗಳಲ್ಲಿ ಜನತೆಯ ಸಮಸ್ಯೆ ಆಲಿಸುವ ಹಿನ್ನೆಲೆಯಲ್ಲಿ ಗೃಹ ಇಲಾಖೆಯ ಮನೆ-ಮನೆಗೆ ಪೊಲೀಸ್ ಎನ್ನುವ ವಿನೂತನ ಪರಿಕಲ್ಪನೆಯ ಕಾರ್ಯಕ್ರಮದ ನಿಮಿತ್ತ ಡಿಜಿ, ಐಜಿಪಿ, ಗದಗ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳ ಮಾರ್ಗದರ್ಶನದಲ್ಲಿ ಮುಂಡರಗಿ ಪೊಲೀಸ್ ಠಾಣೆಯ ಸಿಪಿಐ ಮಂಜುನಾಥ ಕುಸುಗಲ್ಲ ತಾಲೂಕಿನಾದ್ಯಂತ ಅನುಷ್ಠಾನಗೊಳಿಸಿದ್ದಾರೆ.

ಈಗಾಗಲೇ ಗೃಹ ಇಲಾಖೆಯು ರಾಜ್ಯದ ಎಲ್ಲ ಜಿಲ್ಲೆಗಳು ಸೇರಿದಂತೆ ತಾಲೂಕು ವ್ಯಾಪ್ತಿಯಲ್ಲಿ ಬರುವ ಗ್ರಾಮೀಣ ಪೊಲೀಸ್ ಠಾಣೆಯಲ್ಲಿ ಮನೆ-ಮನೆ ಬೀಟ್ ಸಂಚಾರಕ್ಕೆ ಆದೇಶ ಹೊರಡಿಸಿದ ಹಿನ್ನೆಲೆಯಲ್ಲಿ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ್ ಅವರ ಮಾರ್ಗದರ್ಶನದಲ್ಲಿ ಜಿಲ್ಲೆಯ ಆಯಾ ಪೊಲೀಸ್ ಠಾಣೆಯ ಸಿಬ್ಬಂದಿಗಳು ಗ್ರಾಮಗಳಿಗೆ ತೆರಳಿ ಗ್ರಾಮಸ್ಥರ ಸಮಸ್ಯೆಗಳನ್ನು ಆಲಿಸಲು ಮುಂದಾಗಿದ್ದಾರೆ.





ಮನೆ-ಮನೆಗೆ ತೆರಳಿ ಸಮಸ್ಯೆಗಳನ್ನು ಆಲಿಸುವುದೇ ನೂತನ ಪರಿಕಲ್ಪನೆಯ ಉದ್ದೇಶವಾಗಿದೆ. ಗೃಹ ಇಲಾಖೆಯಿಂದ 27 ಅಂಶಗಳನ್ನು ಅಳವಡಿಸಿಕೊಂಡು ಗ್ರಾಮಗಳಿಗೆ ತೆರಳುವ ಬೀಟ್ ಪೊಲೀಸರು ಒಂದು ಬೀಟ್‌ನಲ್ಲಿ 40ರಿಂದ 50 ಮನೆಗಳ ಸಮೂಹ ಪಟ್ಟಿ ಮಾಡಿ, ಪ್ರತಿ ಸಮೂಹಕ್ಕೆ ಒಬ್ಬ ಮುಖ್ಯಸ್ಥರನ್ನು ನೇಮಿಸಲಾಗುತ್ತದೆ, ನಂತರ ರಿಜಿಸ್ಟರನಲ್ಲಿ ದಾಖಲಿಸಲಾಗುತ್ತದೆ.

ಪೊಲೀಸ್ ಬೀಟ್ ಸಿಬ್ಬಂದಿಗಳು ಕಾನೂನು ಬಾಹಿರ ಚಟುವಟಿಕೆಗಳ ನಿಯಂತ್ರಣ, ಶಾಂತಿ ಸುವ್ಯವಸ್ಥೆ, ಸೌಹಾರ್ದತೆ, ಸ್ಥಳೀಯ ಸಮಸ್ಯೆಗಳಿಗೆ ಪರಿಹಾರ, ಪೊಲೀಸರ ಬಗ್ಗೆ ನಂಬಿಕೆ, ಅಲ್ಲದೇ ಮನೆ ಯಜಮಾನರ ದೂರವಾಣಿ ಸಂಖ್ಯೆ ಸಂಗ್ರಹಿಸುವುದು, ಕುಟುಂಬಸ್ಥರ ಸಮಸ್ಥೆಯನ್ನು ರಜಿಸ್ಟರ್‌ಗಳಲ್ಲಿ ದಾಖಲಿಸಿ ಪ್ರತಿ ತಿಂಗಳ 2ನೇ ಶನಿವಾರ ಸಮೂಹದ ಮುಖ್ಯಸ್ಥರು ಮತ್ತು ಸಾರ್ವಜನಿಕರ ಸಭೆ ನಡೆಸಲು ಇಲಾಖೆ ಮುಂದಾಗಿರುವುದು ಜನಸಾಮಾನ್ಯರಲ್ಲಿ ಹೊಸ ಭರವಸೆ ಮೂಡಿಸಿದೆ.

ಗದಗ ಹಿರಿಯ ಪೊಲೀಸ್ ಅಧಿಕಾರಿಗಳ ಸಲಹ್ಯ ಮೇರೆಗೆ ಮುಂಡರಗಿ ಪೊಲೀಸ್ ಠಾಣೆಯ ಸಿಪಿಐ ಮಂಜುನಾಥ ಕುಸಗಲ್ಲ ಅವರು ಪೊಲೀಸ್ ಸಿಬ್ಬಂದಿಗಳ ತಂಡಗಳನ್ನು ರಚನೆ ಮಾಡಿದ್ದಾರೆ. ಪೊಲೀಸ್ ಬೀಟ್ ತಂಡ ಡಂಬಳ ಹೋಬಳಿಯ ಹಿರೇವಡ್ಡಟ್ಟಿ ಸೇರಿದಂತೆ ವಿವಿಧ ಗ್ರಾಮಗಳಿಗೆ ಭೇಟಿ ನೀಡಿ ಗ್ರಾಮಸ್ಥರ ಸಮಸ್ಯೆಗಳನ್ನು ಆಲಿಸಿದ್ದಾರೆ. ಪ್ರತಿ ಬೀಟ್ ತಂಡ ಗ್ರಾಮಗಳಲ್ಲಿ 40ರಿಂದ 50 ಮನೆಗಳಿಗೆ ಭೇಟಿ ನೀಡುವ ಕಾರ್ಯ ಪ್ರಾರಂಭ ಮಾಡಿದೆ.

> ಮನೆ-ಮನೆಗೆ ಪೊಲೀಸ್ ಬೀಟ್ ಸಂಚಾರದ ಭೇಟಿಯಲ್ಲಿ ಜಿಲ್ಲೆಯಾದ್ಯಂತ ಪೊಲೀಸ್ ಸಿಬ್ಬಂದಿಗಳ ಬೀಟ್ ರಚಿಸಿ ವಿವಿಧ ಗ್ರಾಮಗಳಿಗೆ ತೆರಳಿ ಮಾಹಿತಿ ಸಂಗ್ರಹಿಸುವುದು, ಜನರಲ್ಲಿ ಸೌಹಾರ್ದತೆ ಮೂಡಿಸುವುದು ಮತ್ತು ಸಮಸ್ಯೆಗಳನ್ನು ಆಲಿಸುವಂತೆ ತಿಳಿಸಲಾಗಿದೆ. ದೇಶದ ಪ್ರತಿಯೊಬ್ಬ ನಾಗರಿಕರು ದೇಶದ ಮತ್ತು ರಾಜ್ಯದ ಹಿತಕ್ಕಾಗಿ ಸಂವಿಧಾನದ ಪರಿಪಾಲನೆಯ ಮೂಲಕ ನಗರದ ಗ್ರಾಮೀಣ ಜನರು ಸೌಹಾರ್ದತೆಯಿಂದ ನಡೆದುಕೊಂಡಾಗ ಉತ್ತಮ ವಾತಾವರಣ ನಿರ್ಮಾಣವಾಗಲಿದೆ. ಇದರಿರಂದ ನಗರ, ಗ್ರಾಮಗಳಲ್ಲಿ ಕಾನೂನು ಸುವ್ಯವಸ್ಥೆ ಕಾಪಾಡಬಹುದು.
>
> **- ರೋಹನ್ ಜಗದೀಶ.**
> ಗದಗ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ.

## ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ಮುಳಗುಂದ ಪಟ್ಟಣ ಪಂಚಾಯಿತಿ ವ್ಯಾಪ್ತಿಯಲ್ಲಿ ಸ್ವಚ್ಛ ಭಾರತ್ ಮಿಷನ್ 2.0ರ ಅಡಿಯಲ್ಲಿ ಐಇಸಿ ಮಾಹಿತಿ ಶಿಕ್ಷಣ ಮತ್ತು ಸಂವಹನ ಘಟಕದಡಿಯಲ್ಲಿ ಘನ ಮತ್ತು ದ್ರವ ತ್ಯಾಜ್ಯ ನಿರ್ವಹಣೆಯ ಕುರಿತು ನಗರ ಸ್ಥಳೀಯ ಮಟ್ಟದಲ್ಲಿ ವಿವಿಧ ಬಗೆಯ ಚಟುವಟಿಕೆಗಳನ್ನು ಕೈಗೊಳ್ಳಲು ನಲ್ಮಡೇ ಯೋಜನೆಯ ಸ್ವ-ಸಹಾಯ ಸದಸ್ಯರುಗಳನ್ನು ಕಮ್ಯುನಿಟಿ ಮೊಬೈಲೈಜರ್ ಹುದ್ದೆಗೆ ಮಾಸಿಕ ಗೌರವ ಧನದ ಆಧಾರದ ಮೇಲೆ ತಾತ್ಕಾಲಿಕ ಸೇವೆ ಪಡೆದುಕೊಳ್ಳಲು ಅರ್ಜಿ ಆಹ್ವಾನಿಸಲಾಗಿದೆ.

ಅಭ್ಯರ್ಥಿ ಕನಿಷ್ಠ ಎಸ್‌ಎಸ್‌ಎಲ್‌ಸಿ ಪಾಸ್ ಆಗಿರಬೇಕು. ಕನ್ನಡ ಭಾಷೆ ಓದು-ಬರಹ ಜ್ಞಾನ ಹೊಂದಿರಬೇಕು. ಅರ್ಜಿಯೊಂದಿಗೆ ಇತ್ತೀಚಿನ 4 ಭಾವಚಿತ್ರಗಳು, ಆಧಾರ್ ಕಾರ್ಡ್, ಮತದಾರರ ಗುರುತಿನ ಚೀಟಿ, ಪಡಿತರ ಚೀಟಿ, ಪಾನ್ ಕಾರ್ಡ್, ವಿದ್ಯಾರ್ಹತೆ ಸಂಬಂಧಿಸಿದ ದಾಖಲಾತಿಗಳು, ಕಂಪ್ಯೂಟರ್ ತರಬೇತಿ ಹೊಂದಿದ ಬಗ್ಗೆ ಪ್ರಮಾಣಪತ್ರ, ಡೇನಲ್ಮ ಯೋಜನೆಯ ಸ್ವ-ಸಹಾಯ ಸಂಘದ ಸದಸ್ಯರಾಗಿರುವ ಬಗ್ಗೆ ಸಂಘದ ಪ್ರಮಾಣ ಪತ್ರ, ರಾಷ್ಟ್ರೀಕೃತ ಬ್ಯಾಂಕ್ ಪಾಸ್‌ಬುಕ್ ಪ್ರತಿ, ಅನುಭವ ಪ್ರಮಾಣ ಪತ್ರ ಇವುಗಳನ್ನು ಲಗತ್ತಿಸಬೇಕು.

ಅರ್ಜಿ ಸಲ್ಲಿಸಲು ಅಕ್ಟೋಬರ್ 24 ಕೊನೆಯ ದಿನವಾಗಿದ್ದು, ನಿಗದಿತ ಅರ್ಜಿ ನಮೂನೆ ಹಾಗೂ ಹೆಚ್ಚಿನ ಮಾಹಿತಿಗಾಗಿ ಮುಳಗುಂದ ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿಗಳ ಕಾರ್ಯಾಲಯವನ್ನು ಸಂಪರ್ಕಿಸಬಹುದಾಗಿದೆ ಎಂದು ಪ್ರಕಟಣೆ ತಿಳಿಸಿದೆ.

### ಭರದಿಂದ ಸಾಗುತ್ತಿದೆ ಗೋವಿನಜೋಳದ ಒಕ್ಕಣಿ ಕಾರ್ಯ

# ಬೆಂಬಲ ಬೆಲೆಯ ನಿರೀಕ್ಷೆಯಲ್ಲಿ ರೈತ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಸಧ್ಯ ಮಳೆರಾಯ ಬಿಡುವು ನೀಡಿದ್ದು, ತಾಲೂಕಿನಾದ್ಯಂತ ಗೋವಿನಜೋಳದ ಒಕ್ಕಣಿ ಕಾರ್ಯ ಭರದಿಂದ ಸಾಗಿದೆ. ಈಗಾಗಲೇ ಗೋವಿನಜೋಳದ ಮಾರಾಟ ನಡೆಯಬೇಕಾಗಿತ್ತು. ಆದರೆ ಸತತ ಮಳೆಯಿಂದಾಗಿ ಒಕ್ಕಣಿಗೆ ಅವಕಾಶ ಸಿಕ್ಕಿರಲಿಲ್ಲ. ಇದೀಗ ಬಿಸಿಲು ಬೀಳುತ್ತಿರುವುದರಿಂದ ಒಕ್ಕಣಿಗೆ ಅನುಕೂಲವಾಗಿದೆ.

ಪ್ರಸ್ತುತ ವರ್ಷ ಸಾವಿರಾರು ಹೆಕ್ಟೇರ್ ಪ್ರದೇಶದಲ್ಲಿ ರೈತರು ಗೋವಿನಜೋಳದ ಬಿತ್ತನೆ ಮಾಡಿದ್ದಾರೆ. ಉತ್ತಮ ತೇವಾಂಶದಿಂದಾಗಿ ಬೆಳೆಯೂ ಚೆನ್ನಾಗಿ ಬಂದಿದೆ. ಎರಡು-ಮೂರು ವಾರಗಳ ಹಿಂದೆ ಆಗಾಗ ಮಳೆ ಸುರಿಯಲು ಆರಂಭಿಸಿದ್ದರಿಂದ ಒಕ್ಕಣಿ ಮಾಡದೆ ರೈತರು ಗೋವಿನಜೋಳವನ್ನು ಹೊಲದಲ್ಲಿಯೇ ಬಿಟ್ಟಿದ್ದರು. ಈಗ ವಾತಾವರಣ ಒಕ್ಕಣಿಗೆ ಅನುಕೂಲಕರವಾಗಿದೆ.

ಮಾರುಕಟ್ಟೆಯಲ್ಲಿ ಕ್ವಿಂಟಲ್‌ಗೆ 1,800-2,000 ದರದಲ್ಲಿ ಗೋವಿನಜೋಳ ಮಾರಾಟ ಆಗುತ್ತಿದೆ. ಆದರೆ ಕೇಂದ್ರ ಸರ್ಕಾರ ಪ್ರತಿ ಕ್ವಿಂಟಲ್‌ಗೆ 2,400 ರೂಪಾಯಿ ಬೆಂಬಲ ಬೆಲೆ ಘೋಷಣೆ ಮಾಡಿದೆ. ರೈತರಿಗೆ ಅನುಕೂಲ ಆಗಬೇಕಾದರೆ ಕೂಡಲೇ ಖರೀದಿ ಕೇಂದ್ರ



ತೆರೆಯಬೇಕಾದ ಅಗತ್ಯ ಇದೆ. ಖಾಸಗಿ ವ್ಯಾಪಾರಸ್ಥರು ಯಾವುದೇ ಪರವಾನಿಗೆ ಇಲ್ಲದೆ ನೇರವಾಗಿ ರೈತರ ಮನೆ ಮತ್ತು ಕಣಕ್ಕೆ ತೆರಳಿ ಗೋವಿನಜೋಳ ಖರೀದಿಸುತ್ತಿದ್ದಾರೆ. ಕೆಲ ಖರೀದಿದಾರರು ತಕ್ಷಣ ಹಣ ಕೊಟ್ಟರೆ, ಇನ್ನು ಕೆಲವರು ಅರ್ಧ ಹಣ ನೀಡಿ ಉಳಿದದ್ದನ್ನು ಒಂದು ವಾರ ಬಿಟ್ಟು ಕೊಡುತ್ತೇವೆ ಎಂದು ನಂಬಿಸಿ ಖರೀದಿ ಮಾಡುತ್ತಾರೆ.

ಆದರೆ ನಂತರ ಉಳಿದ ಹಣಕ್ಕಾಗಿ ರೈತರು ಸಂಪರ್ಕ ಮಾಡಿದಾಗ ಅವರು ಸಂಪರ್ಕಕ್ಕೆ ಸಿಗುವುದೇ ಇಲ್ಲ. ಹೀಗಾಗಿ ರೈತರು ಮೋಸ ಹೋಗುತ್ತಿದ್ದಾರೆ. ಅಲ್ಲದೆ ಖಾಸಗಿ ವ್ಯಾಪಾರಸ್ಥರು ತೂಕದಲ್ಲಿ ರೈತರಿಗೆ ಅನ್ಯಾಯ ಮಾಡುತ್ತಾರೆ ಎಂಬ ಆರೋಪಗಳು ಕೇಳಿಬಂದಿವೆ. ಕಷ್ಟಪಟ್ಟ ರೈತರಿಗೆ ಸರ್ಕಾರದಿಂದ ಅನುಕೂಲ ಆಗಬೇಕಾದರೆ ಜಿಲ್ಲಾಡಳಿತ ಗೋವಿನಜೋಳವನ್ನು ಬೆಂಬಲ ಬೆಲೆಯಲ್ಲಿ ಖರೀದಿಸಲು ವ್ಯವಸ್ಥೆ ಮಾಡಬೇಕಾಗಿದೆ.

> ಬೆಂಬಲ ಬೆಲೆಯಲ್ಲಿ ಗೋವಿನಜೋಳ ಖರೀದಿಗೆ ಜಿಲ್ಲಾಧಿಕಾರಿಗಳು ವ್ಯವಸ್ಥೆ ಮಾಡಬೇಕು. ಗ್ರಾಮಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ವ್ಯವಸಾಯ ಸೇವಾ ಸೊಸೈಟಿಗಳ ಮೂಲಕ ಖರೀದಿ ಮಾಡಿದರೆ ರೈತರಿಗೆ ಹೆಚ್ಚಿನ ಅನುಕೂಲ ಆಗುತ್ತದೆ. ಇಲ್ಲದಿದ್ದರೆ ಎಪಿಎಂಸಿಯಲ್ಲಿ ಇ-ಟೆಂಡರ್ ಮೂಲಕ ಖರೀದಿಸಲು ಕ್ರಮಕೈಗೊಳ್ಳಬೇಕು ಎಂದು ಕೃಷಿಕ ಸಮಾಜದ ತಾಲೂಕು ಘಟಕದ ಅಧ್ಯಕ್ಷ ಚೆನ್ನಪ್ಪ ಷಣ್ಮುಖಿ ಆಗ್ರಹಿಸಿದ್ದಾರೆ.

## ಆರ್.ಎಸ್.ಎಸ್‌ನ ಆರ್ಥಿಕ ಮೂಲ ಯಾವುದು?



■ವಿಜಯಸಾಕ್ಷಿ ಸುದ್ದಿ, ಗದಗ

ನೂರು ವರ್ಷ ಪೂರೈಸಿರುವ ಆರ್‌ಎಸ್‌ಎಸ್ ಸಂಘಟನೆ ಇನ್ನೂ ನೋಂದಣಿ ಆಗಿಲ್ಲ. ಆರ್‌ಎಸ್‌ಎಸ್ ಪ್ರಮುಖರು ದೇಶ ಮತ್ತು ಕಾನೂನಿಗಿಂತ ದೊಡ್ಡವರು ಎನ್ನುವ ಮನೋಭಾವ ಹೊಂದಿದ್ದಾರೆ. ಶತಮಾನ ಕಂಡ ಸಂಘಟನೆಯ ಹಣಕಾಸಿನ ಮೂಲದ ಬಗ್ಗೆ ಸಾರ್ವಜನಿಕವಾಗಿ ಯಾವುದೇ ಮಾಹಿತಿ ಇಲ್ಲ ಎಂದು ಪ್ರಗತಿಪರ ಚಿಂತಕ ಬಸವರಾಜ ಸೂಳಿಭಾವಿ ಆರೋಪಿಸಿದರು.

ಬುಧವಾರ ನಗರದ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕಳೆದ 50 ವರ್ಷದಿಂದ ತನ್ನ ಕಾರ್ಯಾಲಯದ ಮೇಲೆ ಭಾರತದ ಧ್ವಜ ಹಾರಿಸಿಲ್ಲ. 100 ವರ್ಷದ ಅವಧಿಯ ಪಥಸಂಚಲನ ಮಾಡುವ ಸಂದರ್ಭದಲ್ಲಿಯೂ ಒಂದೇ ಒಂದು ತ್ರಿವರ್ಣ ಧ್ವಜ ಪ್ರದರ್ಶನ ಮಾಡಿಲ್ಲ ಎಂದು ಆಪಾದಿಸಿದರು.

ಸಚಿವ ಪ್ರಿಯಾಂಕ್ ಖರ್ಗೆ, ಸಿಎಂ ಸಿದ್ದರಾಮಯ್ಯನವರಿಗೆ ಬರೆದ ಪತ್ರದಲ್ಲಿ ಆರ್‌ಎಸ್‌ಎಸ್ ನಿಷೇಧ ಮಾಡಬೇಕು ಎಂದಿಲ್ಲ. ಸರ್ಕಾರಿ ಜಾಗದಲ್ಲಿ ಸಂಘದ ಚಟುವಟಿಕೆ ಮಾಡಬಾರದು ಎಂದು ಹೇಳಿದ್ದಾರೆ. ಆದರೆ, ಅವರ ಮೇಲೆ ವೈಯಕ್ತಿಕ ದಾಳಿ ಹಾಗೂ ನಿಂದನೆ ಮಾಡಲಾಗುತ್ತಿದೆ. ಇದು ಸಂವಿಧಾನ ವಿರೋಧಿ ನಡೆಯಾಗಿದೆ ಎಂದರು.

ತಮಿಳುನಾಡಿನಲ್ಲಿ ಎಲ್ಲ ಧಾರ್ಮಿಕ ಸಂಘಟನೆಗಳು ಸರ್ಕಾರದ ಜಾಗವನ್ನು ಬಳಕೆ ಮಾಡಿಕೊಳ್ಳದಂತೆ ನಿರ್ಬಂಧ ಹೇರಲಾಗಿದೆ. ಅಂತೆಯೇ ಕರ್ನಾಟಕದಲ್ಲಿಯೂ ಕಾಯ್ದೆಯನ್ನು ಜಾರಿಗೆ ತರಬೇಕು ಎಂದು ಆಗ್ರಹಿಸಿದರು.

ಅಶೋಕ ಬರಗುಂಡಿ ಮಾತನಾಡಿ, ಸಂವಿಧಾನ ಉಳಿಸುವ ನಿಟ್ಟಿನಲ್ಲಿ ಮತೀಯ ಭಾವನೆ ಬೆಳೆಸುವ ಸಂಸ್ಥೆಗೆ ರಾಜ್ಯ ಸರ್ಕಾರ ನಿರ್ಬಂಧ ಹೇರಬೇಕು ಎಂದು ಒತ್ತಾಯಿಸಿದರು. ಸುದ್ದಿಗೋಷ್ಠಿಯಲ್ಲಿ ಬಿ.ಕೆ. ಪೂಜಾರ, ಬಾಲರಾಜ ಅರಬರ, ಯಲ್ಲಪ್ಪ ರಾಮಗೇರಿ, ಪರಸು ಕಾಳೆ, ಅನಿಲ ಕಾಳೆ, ಬಸವರಾಜ ಬಿಳೆಯಲಿ, ಮುತ್ತು ಬಿಳೆಯಲಿ ಇತರರು ಉಪಸ್ಥಿತರಿದ್ದರು.

### ರೈಲ್ವೆ ನಿಲ್ದಾಣಕ್ಕೆ ಪಂಡಿತ ಪುಟ್ಟರಾಜರ ಹೆಸರು ನಾಮಕರಣ ಮಾಡಲು ಒತ್ತಾಯ

# ಗದುಗಿನಿಂದ ಹೋರಾಟ ಆರಂಭಿಸಲು ನಿರ್ಧಾರ

■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ರೈಲ್ವೆ ನಿಲ್ದಾಣಕ್ಕೆ ಪಂಡಿತ ಪುಟ್ಟರಾಜರ ಹೆಸರು ನಾಮಕರಣ ಮಾಡುವಂತೆ ಒತ್ತಾಯಿಸಿ ಗದುಗಿನಿಂದ ಹೋರಾಟ ಮಾಡಲು ತೀರ್ಮಾನಿಸಿದ್ದೇವೆ. ರಾಜ್ಯಾದ್ಯಂತ ಈ ಹೋರಾಟ ನಡೆಯಲಿದೆ. ಪುಟ್ಟರಾಜರ ಹೆಸರಿಡುವಂತೆ ನಾವು ಭಿಕ್ಷೆ ಬೇಡುವ ಸ್ಥಿತಿ ನಿರ್ಮಾಣವಾಗಿದೆ. ಕಾನೂನು ಸಚಿವ ಎಚ್.ಕೆ. ಪಾಟೀಲರು ಸರ್ಕಾರದ ಮೇಲೆ ಒತ್ತಡ ತಂದು ರಾಜ್ಯ ಸರ್ಕಾರದಿಂದ ಕೇಂದ್ರ ಸರ್ಕಾರಕ್ಕೆ ಶಿಫಾರಸ್ಸು ಮಾಡಬೇಕು ಎಂದು ಕದಂಬ ಸೈನ್ಯ ರಾಜ್ಯಾಧ್ಯಕ್ಷ ಬೇಕರಿ ರಮೇಶ್ ಆಗ್ರಹಿಸಿದರು.

ನಗರದ ಪತ್ರಿಕಾ ಭವನದಲ್ಲಿ ಬುಧವಾರ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ರಾಜ್ಯ ಸರ್ಕಾರ ದ್ವಿಭಾಷಾ ನೀತಿ ಅನುಸರಿಸಿದೆ. ಇದನ್ನು ಬಿಟ್ಟು ತಮಿಳುನಾಡು ಮಾದರಿಯಲ್ಲಿ ತ್ರಿಭಾಷಾ ಸೂತ್ರ ಜಾರಿಗೆ ತರಬೇಕು. ಕನ್ನಡಿಗರ ಬಗ್ಗೆ ಸಾಮಾಜಿಕ



ಜಾಲತಾಣಗಳಲ್ಲಿ ಅವಹೇಳನ ಮಾಡುವ ಕೆಲಸವನ್ನು ಬೇರೆ ರಾಜ್ಯದವರು ಮಾಡುತ್ತಿದ್ದಾರೆ. ಇದಕ್ಕೆ ಕಡಿವಾಣ ಹಾಕಬೇಕು. ತಮಿಳುನಾಡು, ಮಹಾರಾಷ್ಟ್ರ, ಕೇರಳದಲ್ಲಿ ಸ್ಥಳೀಯ ಭಾಷೆ ಮಾತನಾಡದಿದ್ದರೆ ಅಲ್ಲಿ ಜಾಗ ನೀಡುವುದಿಲ್ಲ. ಆದರೆ, ಬೆಳಗಾವಿ ಸೇರಿ ಹಲವು ಭಾಗಗಳಲ್ಲಿ ಕನ್ನಡಿಗರ ಮೇಲೆ ದೌರ್ಜನ್ಯ ನಡೆಯುತ್ತಿದ್ದರೂ ಸರ್ಕಾರ ಕೈಕಟ್ಟಿ ಕುಳಿತಿರುವುದು ನೋವಿನ ಸಂಗತಿಯಾಗಿದೆ ಎಂದು ಬೇಸರ ವ್ಯಕ್ತಪಡಿಸಿದರು. ಉತ್ತರ ಭಾರತದ ಕಾರ್ಖಾನೆಗಳು ರಾಜ್ಯದಲ್ಲಿ ದರ್ಬಾರ್ ನಡೆಸುತ್ತಿವೆ. ಅಲ್ಲಿ ಕನ್ನಡಿಗರಿಗೆ ಅವಕಾಶ ನೀಡುತ್ತಿಲ್ಲ. ಗ್ರೇಟರ್ ಬೆಂಗಳೂರು ಬದಲಾಗಿ ಗ್ರೇಟರ್ ಉತ್ತರ ಕರ್ನಾಟಕ ಮಾಡಿ ಎಂದು ಬೇಕರಿ ರಮೇಶ್ ಆಗ್ರಹಿಸಿದರು.

ಈ ಸಂದರ್ಭದಲ್ಲಿ ರಾಜ್ಯ ಉಪಾಧ್ಯಕ್ಷ ಅಷ್ಪಾಕಲಿ ಹ.ಹೊಸಳ್ಳಿ, ಗದಗ ಜಿಲ್ಲಾಧ್ಯಕ್ಷ ಮಂಜುನಾಥ ಗುಡದೂರ, ಮಹಿಳಾ ಜಿಲ್ಲಾ ಉಪಾಧ್ಯಕ್ಷೆ ಆರಾಧನಾ ಜಿ.ಬಣಕಾರ, ರಾಜ್ಯ ಉಪಾಧ್ಯಕ್ಷ ಎನ್.ಸಿ. ಕಾಂಬಳೆ, ಕಾರ್ಯದರ್ಶಿ ವಿನಾಯಕ ಸಂಡೂರ, ಪ್ರಮುಖರಾದ ಉಮೇಶ್ ರಾಂಪುರ, ಗವಿಶಿದ್ಧಯ್ಯ ಹಳ್ಳಿಕೇರಿ ಮಠ, ರಾಜೇಸಾಬ ಪಿಂಜಾರ್, ಲಕ್ಷ್ಮಣ್ ಹಾಗೂ ರೈತ ಸಂಘದ ಪದಾಧಿಕಾರಿಗಳು ಉಪಸ್ಥಿತರಿದ್ದರು.

> ಕನ್ನಡದ ಪ್ರಥಮ ಸಾಮ್ರಾಜ್ಯ ಸ್ಥಾಪನೆ ಮಾಡಿದ ಕದಂಬ ಚಕ್ರವರ್ತಿ ಮಯೂರ ವರ್ಮ ಹಾಗೂ ಚಾಲುಕ್ಯ ಪರಮೇಶ್ವರ ಇಮ್ಮಡಿ ಪುಲಿಕೇಶಿ ಪುತ್ಥಳಿಯನ್ನು ಬೆಂಗಳೂರಿನ ವಿಧಾನಸೌಧದ ಮುಂದೆ ಮತ್ತು ರಾಜ್ಯದ ಎಲ್ಲ ಜಿಲ್ಲಾ ಕೇಂದ್ರದಲ್ಲಿ ಸ್ಥಾಪನೆ ಮಾಡಬೇಕು.
>
> **- ಎಂ.ಪಿ. ಮುಳಗುಂದ.**
> ರೈತ ಮುಖಂಡ.

## ತೋಟದಲ್ಲಿದ್ದ 2 ಬೃಹತ್ ಗಾತ್ರದ ಹೆಬ್ಬಾವು ರಕ್ಷಣೆ ಮಾಡಿದ ಪೊಲೀಸ್ ಕಾನ್‌ಸ್ಟೇಬಲ್!



■ ವಿಜಯಸಾಕ್ಷಿ ಸುದ್ದಿ, ಹಾವೇರಿ

ತೋಟದಲ್ಲಿದ್ದ ಎರಡು ಬೃಹತ್ ಗಾತ್ರದ ಹೆಬ್ಬಾವುಗಳನ್ನು ಉರಗ ತಜ್ಞ ರಕ್ಷಣೆ ಮಾಡಿದ್ದಾರೆ. ಹಾವೇರಿ ಜಿಲ್ಲೆ ಹಾನಗಲ್ ತಾಲ್ಲೂಕಿನ ಕ್ಯಾಸನೂರಿನ ತೋಟದಲ್ಲಿ 14 ಅಡಿ ಹಾಗೂ 9 ಅಡಿ ಉದ್ದದ ಎರಡು ಬೃಹತ್ ಗಾತ್ರದ ಹೆಬ್ಬಾವುಗಳನ್ನು ರಕ್ಷಣೆ ಮಾಡಲಾಗಿದೆ.

ರಮೇಶ ಉರಗ ತಜ್ಞರಾಗಿದ್ದು, 25 ಕೆಜಿ ಹಾಗೂ 15 ಕೆಜಿ ಗಾತ್ರದ ಎರಡು ಹೆಬ್ಬಾವು ರಕ್ಷಣೆ ಮಾಡಿ ಅರಣ್ಯ ಬಿಟ್ಟಿದ್ದಾರೆ. ವೃತ್ತಿಯಲ್ಲಿ ಪೊಲೀಸ್ ಪೇದೆಯಾಗಿ ಕೆಲಸ ಮಾಡುವ ಪ್ರವೃತ್ತಿಯಲ್ಲಿ ರಮೇಶ ಹಾವು ರಕ್ಷಣೆ ಮಾಡುವ ಕೆಲಸ ಮಾಡುತ್ತಿದ್ದಾರೆ.

ಇನ್ನೂ ಪೊಲೀಸ್ ಕಾನ್‌ಸ್ಟೇಬಲ್ ಕೆಲಸಕ್ಕೆ ಸ್ಥಳೀಯರು ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

## ಬೆಂಗಳೂರಿನಲ್ಲಿ ಮೊದಲ ಬಾರಿಗೆ ಏಕರೂಪ ಖಾತಾ ವ್ಯವಸ್ಥೆ ಜಾರಿ: ಡಿ.ಕೆ. ಶಿವಕುಮಾರ್


■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ನವೆಂಬರ್ 1 ನೇ ತಾರೀಕಿನಿಂದ ಬಿ ಖಾತೆಗಳನ್ನು ಎ ಖಾತೆಗಳಾಗಿ ಬದಲಾವಣೆ ಮಾಡುವ ಐತಿಹಾಸಿಕ ನಿರ್ಣಯಕ್ಕೆ ಸರ್ಕಾರ ತೀರ್ಮಾನ ಮಾಡಿದೆ. ಇದು ಬೆಂಗಳೂರಿನ 15 ಲಕ್ಷ ಆಸ್ತಿಗಳ ಮಾಲೀಕರಿಗೆ ಉಪಯೋಗವಾಗುತ್ತದೆ. ಇದೊಂದು ಕ್ರಾಂತಿಕಾರಕ ತೀರ್ಮಾನ. ಆಸ್ತಿ ಶುದ್ಧೀಕರಣಕ್ಕೆ ನಾಂದಿ" ಎಂದು ಡಿಸಿಎಂ ಡಿ.ಕೆ.ಶಿವಕುಮಾರ್ ಅವರು ಹೇಳಿದರು.

ಜಿಬಿಎ ವ್ಯಾಪ್ತಿಯ ಬಿ-ಖಾತಾ ನಿವೇಶನ ಮಾಲೀಕರಿಗೆ ಬಿ-ಖಾತಾದಿಂದ ಎ-ಖಾತಾಗೆ ಪರಿವರ್ತನೆ ಮತ್ತು ಹೊಸ ನಿವೇಶನಗಳಿಗೂ ಎ-ಖಾತಾ ನೀಡಲು ಹೊಸದಾಗಿ ಜಾರಿಗೊಳಿಸಿರುವ ಆನ್ ಲೈನ್ ವ್ಯವಸ್ಥೆಗೆ ಬೆಂಗಳೂರು ನಗರಾಭಿವೃದ್ಧಿ ಸಚಿವರೂ ಆಗಿರುವ ಡಿಸಿಎಂ ಡಿ.ಕೆ ಶಿವಕುಮಾರ್ ರವರು ವಿಧಾನಸೌಧದಲ್ಲಿ ಬುಧವಾರ ಚಾಲನೆ ನೀಡಿ, ಮಾತನಾಡಿದರು.

### ಅಕ್ಟೋಬರ್ 16, 'ವಿಶ್ವ ಆಹಾರ ದಿನ'ದ ನಿಮಿತ್ತ ಸಾಂದರ್ಭಿಕ ಲೇಖನ

# ಚೆಲ್ಲದಿರಿ ಅನ್ನ, ಬಡವರಿಗದೇ ಚಿನ್ನ




ಆಹಾರವು ಪ್ರತಿಯೊಂದು ಜೀವಿಗಳ ಮೂಲಭೂತ ಅವಶ್ಯಕತೆಗಳಲ್ಲಿ ಒಂದು. ಉತ್ತಮ ಆಹಾರವು ಮನುಷ್ಯನ ಮುಖದ ಮೇಲೆ ನಗುವನ್ನು ಪ್ರಕಾಶಿಸುವಂತೆ ಮಾಡುತ್ತದೆ. ಆಹಾರ, ಜನನ, ನಿದ್ರೆ, ಪ್ರೀತಿ ಮತ್ತು ಸಾವು ಮಾನವನ ಜೀವನದಲ್ಲಿರುವ ಐದು ಮುಖ್ಯ ಸಂಗತಿಗಳಾಗಿವೆ. ಆಹಾರ ಮನುಷ್ಯನ ಜೀವನಕ್ಕೆ ಅತ್ಯಮೂಲ್ಯವಾಗಿದ್ದರೂ, ಇಂದಿಗೂ ಲಕ್ಷಾಂತರ ಜನರು ಹಸಿವಿನಿಂದ ಅಥವಾ ಅರೆಹೊಟ್ಟೆಯಿಂದ ನರಳುತ್ತಿದ್ದಾರೆ. ಇದಕ್ಕೆ ಕಾರಣ ಉಳಿದವರು ಮಾಡುತ್ತಿರುವ ಆಹಾರದ ಪೋಲು ಎಂದರೆ ತಪ್ಪಾಗಲ್ಲ.

ಇದಕ್ಕೆ ಸಾಕ್ಷಿ, ಪ್ರತಿವರ್ಷ ಸಾವಿರಾರು ಟನ್‌ಗಟ್ಟಲೇ ಉತ್ಪಾದನೆಯಾಗುತ್ತಿರುವ ಆಹಾರ ತ್ಯಾಜ್ಯ. ನಾವು ಪ್ರತಿನಿತ್ಯ ಹಾಳುಮಾಡುವ ಆಹಾರ, ಇನ್ನಾರೋ ವ್ಯಕ್ತಿಯ ಹೊಟ್ಟೆ ತುಂಬಿಸಬಹುದು ಎಂಬುದನ್ನು ಎಂದಿಗೂ ಮರೆಯಬಾರದು. ಇದನ್ನು ಕಡಿಮೆಮಾಡಲು, ಆಹಾರದ ಮಹತ್ವದ ಕುರಿತು ಅರಿವು ಮೂಡಿಸುವ ಸಲುವಾಗಿ ಪ್ರತಿವರ್ಷ ವಿಶ್ವದಾದ್ಯಂತ 'ವಿಶ್ವ ಆಹಾರ ದಿನ'ವನ್ನು ಆಚರಿಸಲಾಗುತ್ತಿದೆ.

ಕೃಷಿ ಅಭಿವೃದ್ಧಿಯ ಮೂಲಕ ಜಗತ್ತಿನಾದ್ಯಂತ ಹಸಿವು ಮುಕ್ತ ಸಮಾಜ ನಿರ್ಮಾಣದೊಂದಿಗೆ ಬಡತನ ನಿರ್ಮೂಲನೆ ಮಾಡುವುದು ಹಾಗೂ ಹಸಿವು ಮತ್ತು ಬಡತನದಿಂದ ನರಳುತ್ತಿರುವ ಜನರಿಗೆ ಸೂಕ್ತ ಆಹಾರ ನೀಡಬೇಕು. ನಮ್ಮಲ್ಲಿ ಯಾರೂ ಹಸಿವಿನಿಂದ ಸಾಯಬಾರದು ಎಂಬುದು ಈ ದಿನದ ಪ್ರಮುಖ ಉದ್ದೇಶವಾಗಿದೆ.

ವಿಶ್ವ ಸಂಸ್ಥೆಯ ಆಹಾರ ಮತ್ತು ಕೃಷಿ ಸಂಸ್ಥೆ 1979ರಲ್ಲಿ ಮೊದಲ ಬಾರಿಗೆ ವಿಶ್ವ ಆಹಾರ ದಿನವೆಂದು ಗುರುತಿಸಿತು. ಈ ದಿನವು ಅಕ್ಟೋಬರ್ 16, 1945ರಂದು ಸಂಭವಿಸಿದ ವಿಶ್ವಸಂಸ್ಥೆಯ ಆಹಾರ ಮತ್ತು ಕೃಷಿ ಸಂಸ್ಥೆ ಅಡಿಪಾಯವನ್ನು ಸೂಚಿಸುತ್ತದೆ. ಅಂದಿನಿಂದ ಪ್ರತಿವರ್ಷ ಅಕ್ಟೋಬರ್ 16ನ್ನು ವಿಶ್ವ ಆಹಾರ ದಿನವಾಗಿ ಆಚರಿಸಲಾಗುತ್ತಿದೆ. ಆಹಾರವು ವಿವಿಧ ಹಂತಗಳಲ್ಲಿ ಜನರನ್ನು ಒಟ್ಟುಗೂಡಿಸುತ್ತದೆ. ಇದು ಆತ್ಮ ಮತ್ತು ದೇಹದ ಪೋಷಣೆಯನ್ನು ಕಾಪಾಡುತ್ತದೆ ಎಂದು ಹಿರಿಯರ ಅನುಭವದ ಮಾತು.

ಆಹಾರ ಸೇವಿಸುವುದು ಮಾನವನ ಮೂಲಭೂತ ಹಕ್ಕುಗಳಲ್ಲಿ ಒಂದು. ಸಮೀಕ್ಷೆಯೊಂದರ ಪ್ರಕಾರ ಜಗತ್ತಿನಲ್ಲಿ ಪ್ರತಿ ವರ್ಷ 5 ದಶಲಕ್ಷ ಮಕ್ಕಳು ಹಸಿವಿನಿಂದ ಸಾವಿಗೀಡಾಗುತ್ತಿದ್ದಾರೆ. ಈ ಪೈಕಿ 5 ವರ್ಷದ ಒಳಗಿನ ಮಕ್ಕಳೇ ಹೆಚ್ಚು. ಏಕೆಂದರೆ ಮಕ್ಕಳಿಗೆ ಪೌಷ್ಟಿಕ ಆಹಾರದ ಕೊರತೆಯಿಂದ ಅವರು ಸತ್ವವಿಲ್ಲದ, ಹಳಸಿದ ಆಹಾರದಿಂದ ಈ ಸಾವಿಗಿಡಾಗುತ್ತಿದ್ದಾರೆ. ಬಡ ರಾಷ್ಟ್ರಗಳಲ್ಲಿ ಶೇ. 50ರಷ್ಟು ಮಕ್ಕಳು ಅಪೌಷ್ಟಿಕತೆಯಿಂದ ಬಳಲುತ್ತಿದ್ದಾರೆ. ಹಾಗಾಗಿ ವಿಶ್ವ ಆಹಾರ ದಿನದಡಿಯಲ್ಲಿ 40 ದೇಶಗಳಲ್ಲಿ ಹಸಿವಿನಿಂದ ಬಳಲುವವರ ಸಂಖ್ಯೆಯನ್ನು ಕಡಿಮೆ ಮಾಡಲು ಪಣ ತೊಡಲಾಗಿದೆ.

ಆದಾಗ್ಯೂ ಪ್ರಪಂಚದ ಸೆಂಟ್ರಲ್ ಆಫ್ರಿಕನ್ ರಿಪಬ್ಲಿಕ್, ಚಾಡ್, ಯೆಮೆನ್, ಮಡಗಾಸ್ಕರ್, ಸಿರಿಯಾ, ಜಾಂಬಿಯಾ, ಸಿಯೆರಾ ಲಿಯೋನ್, ಹೈಟಿ, ಸೂಡಾನ್, ಅಫ್ಘಾನಿಸ್ಥಾನ ಇವು ಆಹಾರ ಸಮಸ್ಯೆ ಎದುರಿಸುತ್ತಿರುವ ಪ್ರಮುಖ ದೇಶಗಳಾಗಿವೆ. ಪೌಷ್ಠಿಕಾಂಶದ ಆಹಾರವು ಕೆಲವೊಮ್ಮೆ ದುಬಾರಿಯಾಗಿದೆ ಮತ್ತು ಅನೇಕ ಜನರಿಗೆ ಕೈಗೆಟುಕುವಂತಿಲ್ಲ ಎಂಬ ಅಂಶವನ್ನು ನಾವು ನಿರ್ಲಕ್ಷಿಸಲಾಗುವುದಿಲ್ಲ. ಹೃದಯ ರಕ್ತನಾಳದ ಕಾಯಿಲೆಗಳು, ಮಧುಮೇಹ ಮತ್ತು ಕ್ಯಾನ್ಸರ್‌ಗಳಂತಹ ಸಾಂಕ್ರಾಮಿಕವಲ್ಲದ ಕಾಯಿಲೆಗಳಿಂದ ಹಲವಾರು ಸಾವುಗಳಿಗೆ ಅನಾರೋಗ್ಯಕರ ಆಹಾರವು ಮುಖ್ಯ ಅಪಾಯಕಾರಿ ಅಂಶವಾಗಿದೆ ಎಂದು ನಿಮಗೆ ತಿಳಿದಿದೆಯೇ?

ಆಹಾರ ತ್ಯಾಜ್ಯ ಕಡಿಮೆ ಮಾಡುವಲ್ಲಿ ಪ್ರತಿಯೊಬ್ಬರೂ ಕೈ ಜೋಡಿಸಬೇಕು ಎಂದು ವಿಶ್ವ ಆಹಾರ ಮತ್ತು ಕೃಷಿ ಸಂಸ್ಥೆ ಹೇಳುತ್ತದೆ. ಇದು ಒಬ್ಬರಿಂದ ಸಾಧ್ಯವಾಗುವುದಲ್ಲ. ಅದಕ್ಕಾಗಿ ಪ್ರತಿಯೊಬ್ಬರೂ ಆರೋಗ್ಯಕರ ಆಹಾರವವನ್ನು ಆರಿಸಿ, ಈ ಮೂಲಕ ಆರೋಗ್ಯಕರ ದೇಹ ಮತ್ತು ಪರಿಸರವನ್ನು ಕಾಪಾಡಿಕೊಳ್ಳಬೇಕು. ನಿಮಗೆ ಆರೋಗ್ಯಕರ ಹಾಗೂ ಪರಿಸರಕ್ಕೆ ಸಮರ್ಥವಾಗಿರುವ ಉತ್ಪನ್ನಗಳನ್ನು ಆಯ್ಕೆ ಮಾಡಬೇಕು. ಆಹಾರ ಸಂಗ್ರಹಣೆಯನ್ನು ಸುಧಾರಣೆ ಮಾಡುವುದರ ಮೂಲಕ ಆಹಾರ ವ್ಯರ್ಥವಾಗದಂತೆ ನೋಡಿಕೊಳ್ಳಬೇಕು.

ಸಾಧ್ಯವಾದಷ್ಟು ಮರುಬಳಕೆ ಮಾಡಿ. ಉಳಿದ ಆಹಾರದಿಂದ ಗೊಬ್ಬರ ತಯಾರಿಸಲು ಪ್ರಯತ್ನಿಸಿ. ಸ್ಥಳೀಯ ಪರಿಸರ ವ್ಯವಸ್ಥೆಗಳನ್ನು ಪೋಷಿಸಲು ಸಣ್ಣ ರೈತರು ಮತ್ತು ಸ್ಥಳೀಯ ಉತ್ಪಾದಕರನ್ನು ಬೆಂಬಲಿಸಿ.

2025 ರ ವಿಶ್ವ ಆಹಾರ ದಿನದ ಥೀಮ್ 'ಉತ್ತಮ ಆಹಾರದ ಭವಿಷ್ಯಕ್ಕಾಗಿ ಕೈಜೋಡಿಸಿ' ಎಂದು ಜಿನೀವಾ ಪರಿಸರ ಜಾಲ ಹೇಳುತ್ತದೆ. ಹೆಚ್ಚು ಶಾಂತಿಯುತ, ಸುಸ್ಥಿರ ಮತ್ತು ಆಹಾರ-ಸುರಕ್ಷಿತ ಜಗತ್ತನ್ನು ಸೃಷ್ಟಿಸಲು ಈ ಥೀಮ್ ತಲೆಮಾರುಗಳಾದ್ಯಂತ ಜಾಗತಿಕ ಸಹಯೋಗ ಮತ್ತು ಪಾಲುದಾರಿಕೆಯನ್ನು ಒತ್ತಿ ಹೇಳುತ್ತದೆ. ಇದು ಆಹಾರ ಮತ್ತು ಕೃಷಿ ಸಂಸ್ಥೆಯ 80ನೇ ವಾರ್ಷಿಕೋತ್ಸವದ ಗೌರವವಾಗಿಯೂ ಕಾರ್ಯನಿರ್ವಹಿಸುತ್ತದೆ ಎಂದು ಜಿನೀವಾ ಪರಿಸರ ಜಾಲದ ಒತ್ತಾಸೆಯಾಗಿದೆ.

ಒಟ್ಟಾರೆಯಾಗಿ ಗ್ರಾಮೀಣ ಪ್ರದೇಶದಲ್ಲಿ ಕೆಲಸ ಮಾಡುವ ರೈತರು, ಕಾರ್ಮಿಕರು, ಮಹಿಳೆಯರು, ವಲಸಿಗರು ಮತ್ತು ನಗರಗಳಲ್ಲಿ ದುಡಿಯುವ ಅತ್ಯಂತ ದುರ್ಬಲ ವರ್ಗದ ಜನರಿಗೆ ಅನುಕೂಲವಾಗುವ ಸಾರ್ವಜನಿಕ ನೀತಿಗಳನ್ನು ಉತ್ತೇಜಿಸಿ, ಪ್ರತಿ ಮಗುವಿನಿಂದ ವೃದ್ಧರವರೆಗೆ ಆಹಾರ ಸಿಗುವಂತೆ ನೋಡಿಕೊಳ್ಳಬೇಕಾಗಿರುವುದು ನಮ್ಮ ಸರ್ಕಾರಗಳ ಕರ್ತವ್ಯವಾಗಬೇಕು ಹಾಗೂ ನಾವು ಸಹ ತಿನ್ನುವ ಆಹಾರವನ್ನು ಪೋಲು ಮಾಡದಂತೆ ಸರಿಯಾಗಿ ಬಳಸಿಕೊಳ್ಳಬೇಕು. ಹಾಗೆಯೇ ಒಂದು ಅನ್ನದ ಅಗಳಿನ ಬೆಲೆಯನ್ನು ತಿಳಿಯಬೇಕಾದರೆ ಸಿದ್ಧಗಂಗಾ ಮಠದ ಅನ್ನ ದಾಸೋಹ ಕೇಂದ್ರವನ್ನು ನೋಡಿ ಕಲಿಯಬೇಕು ಆಗಲೇ ಆಹಾರದ ಬೆಲೆ ಗೊತ್ತಾಗುತ್ತದೆ.



- ಬಸವರಾಜ ಎಮ್.ಯರಗುಪ್ಪಿ.
ಶಿಕ್ಷಕರು, ಹವ್ಯಾಸಿ ಬರಹಗಾರರು
ಲಕ್ಷ್ಮೇಶ್ವರ.

## ವಿಶ್ವಸಂಸ್ಥೆಯ ಮಾನವ ಹಕ್ಕುಗಳ ಮಂಡಳಿಗೆ ಏಳನೇ ಬಾರಿಗೆ ಆಯ್ಕೆಯಾದ ಭಾರತ

■ ವಿಜಯಸಾಕ್ಷಿ ಸುದ್ದಿ, ನವದೆಹಲಿ



ಭಾರತವು 2026-28ರ ಅವಧಿಗೆ ವಿಶ್ವಸಂಸ್ಥೆಯ ಮಾನವ ಹಕ್ಕುಗಳ ಮಂಡಳಿಗೆ (ಯುಎನ್‌ಎಚ್‌ಆರ್‌ಸಿ) ಆಯ್ಕೆಯಾಗಿದ್ದು, ಇದು ಜಿನೀವಾ ಮೂಲದ ಮಾನವ ಹಕ್ಕುಗಳ ಸಂಸ್ಥೆಯಲ್ಲಿ ದೇಶದ ಏಳನೇ ಅವಧಿಯನ್ನು ಗುರುತಿಸುತ್ತದೆ.

ಮಂಗಳವಾರ ನಡೆದ ಚುನಾವಣೆಯ ಫಲಿತಾಂಶಗಳನ್ನು ಪ್ರಕಟಿಸಿದ ಯುಎನ್‌ಎಚ್‌ಆರ್‌ಸಿ ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಭಾರತದ ಮೂರು ವರ್ಷಗಳ ಅವಧಿ ಜನವರಿ 1, 2026 ರಂದು ಪ್ರಾರಂಭವಾಗಲಿದೆ ಎಂದು ತಿಳಿಸಿದೆ.

ವಿಶ್ವಸಂಸ್ಥೆಗೆ ಭಾರತದ ಖಾಯಂ ಪ್ರತಿನಿಧಿ ಪರ್ವತನೇನಿ ಹರೀಶ್ ಅವರು ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಎಲ್ಲ ನಿಯೋಗಗಳ ಅಗಾಧ ಬೆಂಬಲಕ್ಕಾಗಿ ಧನ್ಯವಾದಗಳನ್ನು ಅರ್ಪಿಸಿದ್ದಾರೆ.

"ಭಾರತವು ಇಂದು 2026-28ರ ಅವಧಿಗೆ ಮಾನವ ಹಕ್ಕುಗಳ ಮಂಡಳಿಗೆ ಏಳನೇ ಬಾರಿಗೆ ಆಯ್ಕೆಯಾಗಿದೆ" ಎಂದು ಅವರು ಹೇಳಿದರು.

ಈ ಚುನಾವಣೆಯು ಮಾನವ ಹಕ್ಕುಗಳು ಮತ್ತು ಮೂಲಭೂತ ಸ್ವಾತಂತ್ರ್ಯಗಳಿಗೆ ಭಾರತದ ಅಚಲ ಬದ್ಧತೆಯನ್ನು ಪ್ರತಿಬಿಂಬಿಸುತ್ತದೆ ಎಂದು ರಾಜತಾಂತ್ರಿಕರು ಹೇಳಿದರು.

"ನಮ್ಮ ಅಧಿಕಾರಾವಧಿಯಲ್ಲಿ ಈ ಉದ್ದೇಶವನ್ನು ಪೂರೈಸಲು ನಾವು ಎದುರು ನೋಡುತ್ತಿದ್ದೇವೆ" ಎಂದು ಅವರು ಹೇಳಿದರು.

ಯುಎನ್ ಮಾನವ ಹಕ್ಕುಗಳ ಮಂಡಳಿಯು ಸಮಾನ ಭೌಗೋಳಿಕ ವಿತರಣಾ ನಿಯಮಗಳ ಅಡಿಯಲ್ಲಿ ಮೂರು ವರ್ಷಗಳ ಅವಧಿಗೆ ಯುಎನ್ ಜನರಲ್ ಅಸೆಂಬ್ಲಿಯಿಂದ ಆಯ್ಕೆಯಾದ 47 ಸದಸ್ಯ ರಾಷ್ಟ್ರಗಳನ್ನು ಒಳಗೊಂಡಿದೆ.

ಕೌನ್ಸಿಲ್ ಸ್ಥಾನಗಳನ್ನು ಐದು ಪ್ರಾದೇಶಿಕ ಗುಂಪುಗಳಿಗೆ ಈ ಕೆಳಗಿನಂತೆ ಹಂಚಲಾಗಿದೆ: ಆಫ್ರಿಕನ್ ರಾಜ್ಯಗಳು, 13 ಸ್ಥಾನಗಳು; ಏಷ್ಯಾ-ಪೆಸಿಫಿಕ್ ರಾಜ್ಯಗಳು, 13 ಸ್ಥಾನಗಳು; ಪೂರ್ವ ಯುರೋಪಿಯನ್ ರಾಜ್ಯಗಳು, 6 ಸ್ಥಾನಗಳು; ಲ್ಯಾಟಿನ್ ಅಮೇರಿಕನ್ ಮತ್ತು ಕೆರಿಬಿಯನ್ ರಾಜ್ಯಗಳು, 8 ಸ್ಥಾನಗಳು; ಮತ್ತು ಪಶ್ಚಿಮ ಯುರೋಪಿಯನ್ ಮತ್ತು ಇತರ ರಾಜ್ಯಗಳು, 7 ಸ್ಥಾನಗಳು.

ಸತತ ಎರಡು ಅವಧಿಗಳ ನಂತರ 2024 ರಲ್ಲಿ ಯುಎನ್‌ಎಚ್‌ಆರ್‌ಸಿಯಲ್ಲಿ ಕೊನೆಯ ಬಾರಿಗೆ ಸೇವೆ ಸಲ್ಲಿಸಿದ ಭಾರತ, ಈ ವರ್ಷ ಸ್ವಲ್ಪ ಅಂತರವನ್ನು ತೆಗೆದುಕೊಂಡು 2026-28 ಅವಧಿಗೆ ಚುನಾವಣೆಗೆ ಸ್ಪರ್ಧಿಸುವ ಮೊದಲು ಮೂರನೇ ನೇರ ಅಧಿಕಾರಾವಧಿಯನ್ನು ನಿರ್ಬಂಧಿಸುವ ನಿಯಮಗಳಿಗೆ ಅನುಸಾರವಾಗಿ ಆಯ್ಕೆಯಾಯಿತು. 2011, 2018 ಮತ್ತು 2025 ರಲ್ಲಿ ಮೂರು ಕಡ್ಡಾಯ ವಿರಾಮಗಳನ್ನು ಹೊರತುಪಡಿಸಿ, ಭಾರತವು 2006 ರಲ್ಲಿ ರಚನೆಯಾದಾಗಿನಿಂದ ನಿರಂತರವಾಗಿ ಕೌನ್ಸಿಲ್‌ನ ಸದಸ್ಯ ರಾಷ್ಟ್ರವಾಗಿದೆ. 2006 ರಲ್ಲಿ ನಡೆದ ಮೊದಲ ಕೌನ್ಸಿಲ್ ಚುನಾವಣೆಯಲ್ಲಿ, ಭಾರತವು 190 ಮತಗಳಲ್ಲಿ 173 ಮತಗಳನ್ನು ಪಡೆದು ಅತಿ ಹೆಚ್ಚು ಮತಗಳೊಂದಿಗೆ ಆಯ್ಕೆಯಾಯಿತು. ಅಂದಿನಿಂದ, ಭಾರತವು 2006-2007, 2008-2010, 2012-2014, 2015-2017, 2019-2021 ಮತ್ತು 2022-2024 ರಲ್ಲಿ ಆರು ಅವಧಿಗಳನ್ನು ಹೊಂದಿದೆ.

## ಎನ್‌ಎಸ್‌ಎಸ್‌ನಿಂದ ಸ್ವಚ್ಛತಾ ಕಾರ್ಯ




■ ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಪ್ರತಿಷ್ಠಿತ ಕೆ.ಎಲ್.ಇ ಸಂಸ್ಥೆಯ ಕಲಾ ಹಾಗೂ ವಾಣಿಜ್ಯ ಮಹಾವಿದ್ಯಾಲಯದ ಎನ್.ಎಸ್.ಎಸ್. ಘಟಕದ ವತಿಯಿಂದ ಗದಗ ನಗರದ ಐತಿಹಾಸಿಕ ಪ್ರಸಿದ್ಧ ಶ್ರೀ ಸೋಮೇಶ್ವರ ದೇವಸ್ಥಾನ (ಕರೇ ದೇವರ ಗುಡಿ) ಹಾಗೂ ಶ್ರೀ ರಾಮೇಶ್ವರ ದೇವಸ್ಥಾನದಲ್ಲಿ 'ಸ್ವಚ್ಛಮೇವ ಜೀವಿತೇ' ಎಂಬ ಘೋಷಣೆಯಡಿಯಲ್ಲಿ ಸ್ವಚ್ಛತಾ ಕಾರ್ಯವನ್ನು ಹಮ್ಮಿಕೊಳ್ಳಲಾಗಿತ್ತು.

ದೇವಸ್ಥಾನದ ಅರ್ಚಕರಾದ ಪ್ರದೀಪ ವಿ.ಹೀರೇಮಠ ಶಾಸ್ತ್ರಿಗಳು ಎನ್.ಎಸ್.ಎಸ್. ಘಟಕದ ಸ್ವಯಂ ಸೇವಕರೊಂದಿಗೆ ಸಂವಾದ ನಡೆಸಿ, ದೇವಸ್ಥಾನದ ಇತಿಹಾಸವನ್ನು ತಿಳಿಸಿದರು.

ಚಟುವಟಿಕೆಯಲ್ಲಿ ಎನ್.ಎಸ್.ಎಸ್ ಘಟಕದ ಕಾರ್ಯಕ್ರಮಾಧಿಕಾರಿ ಪ್ರೊ. ವಾಗೀಶ ಗು.ರೇಶ್ಮಿ, ಕಾರ್ಯನಿರ್ವಾಹಕ ಅಪ್ಪಣ್ಣ ಹಡಪದ, ನೀಲಮ್ಮ ಸೀತಾರಳ್ಳಿ, ಕಾರ್ಯದರ್ಶಿ ಪ್ರಶಾಂತ ಕಲಬುರ್ಗಿ, ಮುತ್ತಪ್ಪ ನೈನಾಪೂರ, ರುದ್ರಗೌಡ ಹಿರೇಗೌಡ್ರ, ಐಶ್ವರ್ಯ ಶಲವಡಿ, ಸಹನಾ ನಾಲ್ವಾಡದ, ಎನ್.ಎಸ್.ಎಸ್ ತಂಡ 1, 4, ಮತ್ತು 10ರ ನಾಯಕರಾದ ಮಹಾದೇವಪ್ಪ ಬೋಳಣ್ಣವರ, ರೇಖಾ ಪೂಜಾರ, ಆಕಾಶ ಕಳಗಣ್ಣವರ, ಸಹನಾ ನಾಲ್ವಾಡದ, ಸೋಮಶೇಖರ ಕುರಿ, ಶಹನಾಜ ನದಾಫ್, ಎನ್.ಎಸ್.ಎಸ್ ಘಟಕದ ವರದಿಗಾರರಾದ ಸವಿತಾ ಕಾಮತ ಮತ್ತು ಸ್ವಯಂ ಸೇವಕರು ಉಪಸ್ಥಿತರಿದ್ದರು.

## ಆರ್‌ಎಸ್‌ಎಸ್ ಚಟುವಟಿಕೆ ನಿಷೇಧ: ಸಚಿವ ಪ್ರಿಯಾಂಕ್ ಖರ್ಗೆ ಹೇಳಿರುವುದಲ್ಲಿ ತಪ್ಪೇನಿದೆ; ಸಿಎಂ ಸಿದ್ಧರಾಮಯ್ಯ




■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಸರ್ಕಾರಿ ಸ್ಥಳಗಳಲ್ಲಿ ಆರ್‌ಎಸ್‌ಎಸ್ ಚಟುವಟಿಕೆಗಳಿಗೆ ಅವಕಾಶ ನೀಡಬಾರದು. ತಮಿಳುನಾಡು ಮಾದರಿಯಲ್ಲಿ ನಿಷೇಧ ಹೇರಬೇಕು ಎಂದು ಸಚಿವ ಪ್ರಿಯಾಂಕ್ ಖರ್ಗೆ ಹೇಳಿದ್ದಾರೆ, ಅದರಲ್ಲಿ ತಪ್ಪೇನಿದೆ?. ಬೆದರಿಕೆ ಕರೆಗಳು ಬರುತ್ತಿರುವುದಾಗಿ ಅವರು ಖುದ್ದಾಗಿ ತಿಳಿಸಿದ್ದಾರೆ. ಇಂತಹ ಬೆದರಿಕೆಗಳಿಗೆ ನಾವು ಹೆದರುವುದಿಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು.

ಬುಧವಾರ (ಅ.15) ಮೈಸೂರು ವಿಮಾನ ನಿಲ್ದಾಣದಲ್ಲಿ ಮಾತನಾಡಿದ ಸಿಎಂ, "ತಮಿಳುನಾಡಿನಲ್ಲಿ ಆರ್‌ಎಸ್‌ಎಸ್ ಮೇಲೆ ಯಾವ ರೀತಿಯ ನಿಷೇಧ ಹೇರಲಾಗಿದೆ ಎಂಬ ಬಗ್ಗೆ ಮಾಹಿತಿ ತರಿಸುವಂತೆ ಮುಖ್ಯ ಕಾರ್ಯದರ್ಶಿಗೆ ಸೂಚಿಸಲಾಗಿದೆ. ವರದಿ ಬಂದ ನಂತರ ಅದನ್ನು ಪರಿಶೀಲಿಸಲಾಗುವುದು. ಪ್ರಿಯಾಂಕ್ ಖರ್ಗೆಯವರಿಗೆ ರಕ್ಷಣೆ ಒದಗಿಸಲಾಗುವುದು ಎಂದು ತಿಳಿಸಿದರು.


ಬಿಜೆಪಿಯವರು ತಾಕತ್ತಿದ್ದರೆ ಆರ್‌ಎಸ್‌ಎಸ್ ಮೇಲೆ ನಿಷೇಧ ಹೇರಲಿ ಎಂದಿರುವ ಬಗ್ಗೆ ಪ್ರತಿಕ್ರಿಯೆ ನೀಡಿದ ಸಿಎಂ, ಚುನಾವಣಾ ಸಂದರ್ಭದಲ್ಲಿಯೂ ಬಿಜೆಪಿಯವರು ತಾಕತ್ತಿದ್ದರೆ ಬನ್ನಿ ಎಂದಿದ್ದರು. ಆದರೆ, ಸೋತು ಹೋದರು ಎಂದು ಕಾಳೆಲೆದರು.

ಸಾಮಾಜಿಕ, ಆರ್ಥಿಕ ಮತ್ತು ಶೈಕ್ಷಣಿಕ ಸಮೀಕ್ಷೆಯು ತಡವಾಗುತ್ತಿರುವ ಬಗ್ಗೆ ಸುದ್ದಿಗಾರರ ಪ್ರಶ್ನೆಗೆ ಉತ್ತರಿಸಿದ ಸಿಎಂ, ಬೆಂಗಳೂರು ನಗರ ಹೊರತು, ಬೇರೆಲ್ಲಿಯೂ ಶೇಕಡವಾರು ಪ್ರಮಾಣದಲ್ಲಿ ಕಡಿಮೆಯಾಗಿಲ್ಲ ಎಂದರು.

ಶಾಸಕರಿಗೆ ಅನುದಾನ ನೀಡುವಲ್ಲಿ ಸರ್ಕಾರ ತಾರತಮ್ಯ ಮಾಡುತ್ತಿದೆ ಎಂದು ಶ್ರೀನಿವಾಸಪುರ ಶಾಸಕ ಹೈಕೋರ್ಟ್ ಮೊರೆ ಹೋಗಿರುವ ಬಗ್ಗೆ ಮಾತನಾಡಿದ ಸಿಎಂ, ಜೆಡಿಎಸ್‌ನವರು ನಮ್ಮ ಶಾಸಕರಿಗೆ ಅನುದಾನ ನೀಡಿದ್ದರೇ? ಎಂದು ಪ್ರಶ್ನಿಸಿದರು. ರಾಜ್ಯದ ಸರ್ವತೋಮುಖ ಅಭಿವೃದ್ಧಿಯಾಗಬೇಕಿದ್ದು, ಎಲ್ಲರಿಗೂ ಅನುದಾನ ಒದಗಿಸಲಾಗುತ್ತಿದೆ ಎಂದರು.

## ಮಹಿಳೆಯನ್ನು ಬಲಿ ಪಡೆದ ವರದಕ್ಷಿಣೆ ಕಿರುಕುಳ

■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ



ಶಿರಹಟ್ಟಿ ತಾಲೂಕಿನ ಮಜ್ಜೂರ ತಾಂಡಾದ ಪ್ರಿಯಾಂಕಾ ಮಾಂತೇಶ ಲಮಾಣಿ (22) ಎಂಬ ಮಹಿಳೆ ವರದಕ್ಷಿಣೆ ಕಿರುಕುಳದಿಂದ ಸಾವಿಗೀಡಾಗಿದ್ದಾಳೆ ಎಂದು ಶಿರಹಟ್ಟಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

10-5-2025ರಂದು ಮದುವೆಯಾಗಿದ್ದ ಪ್ರಿಯಾಂಕಾಳಿಗೆ ವರದಕ್ಷಿಣೆ ಹಣ ತೆಗೆದುಕೊಂಡು ಬಾ ಎಂದು ಚಿತ್ರಹಿಂಸೆ ಕೊಡುತ್ತಾ ಅ.10ರ ರಾತ್ರಿ ಯಾವುದೋ ಸಮಯದಲ್ಲಿ ಕೊಲೆ ಮಾಡಿ ಆಕೆಯ ಮೃತ ದೇಹವನ್ನು ಮನೆಯ ನೀರಿನ ತೊಟ್ಟಿಯಲ್ಲಿ ಹಾಕಿರುತ್ತಾರೆಂದು ಮೃತಳ ತಂದೆ ಶಿರಹಟ್ಟಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಿದ್ದಾರೆಂದು ಪಿಎಸ್‌ಐ ಈರಪ್ಪ ರಿತ್ತಿ ತಿಳಿಸಿದ್ದಾರೆ.

## ಟ್ರಾನ್ಸ್‌ಜೆಂಡರ್ ಸಮೀಕ್ಷೆ: 'ಸ್ಟ್ರಿಪ್ ಆ್ಯಂಡ್ ಸರ್ಚ್' ವಿಧಾನಕ್ಕೆ ಹೈಕೋರ್ಟ್ ತಡೆ

■ ವಿಜಯಸಾಕ್ಷಿ ಸುದ್ದಿ, ನವದೆಹಲಿ

ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ ರಾಜ್ಯದಲ್ಲಿ ಹಮ್ಮಿಕೊಂಡಿರುವ ಟ್ರಾನ್ಸ್‌ಜೆಂಡರ್ ಸಮೀಕ್ಷೆಯಯಲ್ಲಿ ಸ್ಟ್ರಿಪ್ ಆ್ಯಂಡ್ ಸರ್ಚ್ (ಬಟ್ಟೆ ತೆಗೆಸಿ ಶೋಧಿಸುವ) ವಿಧಾನಕ್ಕೆ ಹೈಕೋರ್ಟ್ ಬುಧವಾರ (ಅ.15) ತಡೆ ನೀಡಿದೆ.

ಸೆಪ್ಟೆಂಬರ್ 15ರಂದು ಪ್ರಾರಂಭವಾದ ಸಮೀಕ್ಷೆಯಲ್ಲಿ ಸಂಗ್ರಹಿಸಿದ ಮಾಹಿತಿಯನ್ನು ಕಟ್ಟುನಿಟ್ಟಾಗಿ ಗೌಪ್ಯವಾಗಿಡಬೇಕು, ಎಲ್ಲೂ ಬಹಿರಂಗಪಡಿಸಬಾರದು ಎಂದು ಮುಖ್ಯ ನ್ಯಾಯಮೂರ್ತಿ ವಿಭು ಬಖ್ರು ಮತ್ತು ನ್ಯಾಯಮೂರ್ತಿ ಸಿಎಂ ಪೂಣಚ್ಚ ಅವರ ವಿಭಾಗೀಯ ಪೀಠ ಸರ್ಕಾರಕ್ಕೆ ನಿರ್ದೇಶಿಸಿದೆ.

'ಲಿಂಗತ್ವ ಅಲ್ಪಸಂಖ್ಯಾತರ ಸಮೀಕ್ಷೆ'ನಡೆಸಲು ರಾಜ್ಯ ಹೊರಡಿಸಿದ ಅಧಿಸೂಚನೆಗಳನ್ನು ರದ್ದುಗೊಳಿಸುವಂತೆ ಕೋರಿ ಅನಿತಾ ಹ್ಯುಮಾನಿಟೇರಿಯನ್ ಫೌಂಡೇಶನ್ ಸಲ್ಲಿಸಿದ್ದ ಅರ್ಜಿ ವಿಚಾರಣೆ ನಡೆಸಿದ ಹೈಕೋರ್ಟ್ ಮಧ್ಯಂತರ ಆದೇಶ ಹೊರಡಿಸಿದೆ.

## ಹಿಜಾಬ್ ಧರಿಸಿದ ಬಾಲಕಿಗೆ ಓದು ಮುಂದುವರಿಸಲು ಅವಕಾಶ ನೀಡುವಂತೆ ಕೇರಳ ಸಚಿವರ ಸೂಚನೆ

■ ವಿಜಯಸಾಕ್ಷಿ ಸುದ್ದಿ, ಕೇರಳ



ಕೊಚ್ಚಿಯ ಕ್ರಿಶ್ಚಿಯನ್ ಖಾಸಗಿ ಶಾಲೆಯಲ್ಲಿ ಓದುತ್ತಿರುವ ಮುಸ್ಲಿಂ ಹುಡುಗಿ ತನ್ನ ಧಾರ್ಮಿಕ ಗುರುತಾದ ಹಿಜಾಬ್ ಧರಿಸಿ ಶಿಕ್ಷಣ ಮುಂದುವರಿಸಲು ಅವಕಾಶ ನೀಡುವಂತೆ ಕೇರಳದ ಸಾಮಾನ್ಯ ಶಿಕ್ಷಣ ಸಚಿವ ವಿ. ಶಿವನ್‌ಕುಟ್ಟಿ ಮಂಗಳವಾರ ನಿರ್ದೇಶನ ನೀಡಿದ್ದಾರೆ. 'ಯಾವುದೇ ಶಿಕ್ಷಣ ಸಂಸ್ಥೆಯು ಸಾಂವಿಧಾನಿಕ ಹಕ್ಕುಗಳನ್ನು ಉಲ್ಲಂಘಿಸಲು ಅವಕಾಶ ನೀಡುವುದಿಲ್ಲ' ಎಂದು ಅವರು ಹೇಳಿದ್ದಾರೆ.

ಜಾತ್ಯತೀತ ಮೌಲ್ಯಗಳನ್ನು ಎತ್ತಿಹಿಡಿಯುವ ಕೇರಳದಲ್ಲಿ, ಯಾವುದೇ ವಿದ್ಯಾರ್ಥಿಯು ಧರ್ಮದ ಕಾರಣಕ್ಕೆ ತೊಂದರೆ ಎದುರಿಸಬಾರದು. 'ಹಿಜಾಬ್' (ಧಾರ್ಮಿಕ ಶಿರಸ್ತ್ರಾಣ) ಧರಿಸಿದ ಬಾಲಕಿಗೆ ಸಂಬಂಧಿಸಿದಂತೆ ವಿದ್ಯಾರ್ಥಿನಿ ಮತ್ತು ಆಕೆಯ ಪೋಷಕರಿಗೆ ಉಂಟಾದ ಮಾನಸಿಕ ತೊಂದರೆಯನ್ನು ಸಂಸ್ಥೆಗೆ ತಿಳಿಸುವಂತೆ ಶಾಲೆಯ ಪ್ರಾಂಶುಪಾಲರು ಮತ್ತು ಆಡಳಿತ ಮಂಡಳಿಗೆ ಸೂಚಿಸಿದ್ದಾರೆ.

ಬುಧವಾರ ಬೆಳಿಗ್ಗೆ 11 ಗಂಟೆಯೊಳಗೆ ಈ ಸಂಬಂಧ ಸಚಿವರಿಗೆ ವರದಿ ಸಲ್ಲಿಸಲು ಅವರಿಗೆ ಸೂಚಿಸಲಾಗಿದೆ ಎಂದು ಶಿವನ್‌ಕುಟ್ಟಿ ಅವರ ಕಚೇರಿ ಹೊರಡಿಸಿದ ಹೇಳಿಕೆ ತಿಳಿಸಿದೆ.

ಜಾತ್ಯತೀತ ಮೌಲ್ಯಗಳನ್ನು ಎತ್ತಿಹಿಡಿಯುವ ಕೇರಳದಲ್ಲಿ ಯಾವುದೇ ವಿದ್ಯಾರ್ಥಿಯು ಧಾರ್ಮಿಕ ಕಾರಣಕ್ಕೆ ತೊಂದರೆ ಎದುರಿಸಬಾರದು ಎಂದು ಶಿವನ್‌ಕುಟ್ಟಿ ಹೇಳಿಕೆಯಲ್ಲಿ ಸ್ಪಷ್ಟಪಡಿಸಿದ್ದಾರೆ.

ಎರ್ನಾಕುಲಂ ಶಿಕ್ಷಣ ಉಪ ನಿರ್ದೇಶಕರು ಸಲ್ಲಿಸಿದ ವರದಿಯ ನಂತರ ಸಚಿವರ ನಿರ್ದೇಶನ ಬಂದಿದೆ. ವರದಿಯಲ್ಲಿ, ಶಾಲಾ ಅಧಿಕಾರಿಗಳ ಕಡೆಯಿಂದ ಗಂಭೀರ ಲೋಪವಾಗಿದೆ ಎಂದು ಹೇಳಲಾಗಿದೆ.

ಹಿಜಾಬ್ ಕಾರಣದಿಂದ ವಿದ್ಯಾರ್ಥಿನಿಯನ್ನು ತರಗತಿಗೆ ಹಾಜರಾಗಲು ಬಿಡದಿರುವುದು ಗಂಭೀರ ದುಷ್ಕೃತ್ಯ, ಶಿಕ್ಷಣ ಹಕ್ಕು ಕಾಯ್ದೆಯ ಉಲ್ಲಂಘನೆಯಾಗಿದೆ ಎಂದು ವರದಿಯಲ್ಲಿ ಉಲ್ಲೇಖಿಸಲಾಗಿದೆ.

ಈ ಮಧ್ಯೆ, ಕೇರಳದ ಪಲ್ಲೂರುತಿಯಲ್ಲಿ ಕ್ರಿಶ್ಚಿಯನ್ ಆಡಳಿತ ಮಂಡಳಿ ನಡೆಸುತ್ತಿರುವ ಖಾಸಗಿ ಶಾಲೆಗೆ ಹಿಜಾಬ್ ಧರಿಸಿದ್ದಕ್ಕಾಗಿ ಎಂಟನೇ ತರಗತಿಯ ವಿದ್ಯಾರ್ಥಿನಿಯ ಪೋಷಕರೊಂದಿಗೆ ವಿವಾದ ಉಲ್ಬಣಗೊಂಡ ನಂತರ ಸೋಮವಾರ ಎರಡು ದಿನಗಳ ರಜೆ ಘೋಷಿಸಬೇಕಾಯಿತು.

ರಾಜಕೀಯ ಸಂಘಟನೆಯಾದ ಸೋಶಿಯಲ್ ಡೆಮಾಕ್ರಟಿಕ್ ಪಾರ್ಟಿ ಆಫ್ ಇಂಡಿಯಾ (ಎಸ್‌ಡಿಪಿಐ) ಪೋಷಕರ ಬೆಂಬಲಕ್ಕೆ ನಿಂತಿದೆ. ಪಕ್ಷದ ಸದಸ್ಯರು ಕ್ರೈಸ್ತ ಸನ್ಯಾಸಿನಿಯರಾದ ಶಾಲಾ ಅಧಿಕಾರಿಗಳೊಂದಿಗೆ ಅನುಚಿತವಾಗಿ ವರ್ತಿಸಿದ್ದಾರೆ ಎಂದು ಶಾಲಾ ಪಿಟಿಎ ಅಧಿಕಾರಿಯೊಬ್ಬರು ಆರೋಪಿಸಿದ್ದಾರೆ. ಸೇಂಟ್ ರೀಟಾ ಪಬ್ಲಿಕ್ ಶಾಲೆಯ ಪ್ರಾಂಶುಪಾಲರಾದ ಸಿಸ್ಟರ್ ಹೆಲೀನಾ ಆಲ್ಬಿ ಅವರು ಸೋಮವಾರ ಮತ್ತು ಮಂಗಳವಾರ ರಜೆ ಘೋಷಿಸಿ ಹೊರಡಿಸಿದ ಪತ್ರವು ಸಾಮಾಜಿಕ ಮಾಧ್ಯಮದಲ್ಲಿ ಕಾಣಿಸಿಕೊಂಡ ನಂತರ ಈ ವಿಷಯ ಬೆಳಕಿಗೆ ಬಂದಿದೆ.

# ಸುಂದರ ಬದುಕಿಗೆ ಶಿಕ್ಷಣ ಅವಶ್ಯಕ



■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಸುಂದರ ಬದುಕು ನಿರ್ಮಿಸಿಕೊಳ್ಳಲು ಪ್ರತಿಯೊಬ್ಬರಿಗೂ ಶಿಕ್ಷಣ ಅವಶ್ಯಕವಾಗಿದೆ ಎಂದು ಸುಧಾ ಹುಚ್ಚಣ್ಣವರ ಹೇಳಿದರು.

ಅವರು ಪಟ್ಟಣದ ಆರ್.ಎನ್. ದೇಶಪಾಂಡೆ ಸರಕಾರಿ ಪ್ರಥಮದರ್ಜೆ ಕಾಲೇಜಿನಲ್ಲಿ ಪಠ್ಯೇತರ ಚಟುವಟಿಕೆಗಳನ್ನು ಉದ್ಘಾಟಿಸಿ ಮಾತನಾಡಿ, ಜೀವನದಲ್ಲಿ ನೈತಿಕ ಮೌಲ್ಯ, ವೃತ್ತಿಪರ ಕೌಶಲ್ಯ ಕಲಿಸುವ ಮೂಲಕ ಸಮಾಜದಲ್ಲಿ ಉತ್ತಮ ಪ್ರಜೆಗಳನ್ನಾಗಿ ನಿರ್ಮಿಸುವುದು ಶಿಕ್ಷಣವಾಗಿದ್ದು, ಪ್ರತಿಯೊಬ್ಬರೂ ಶಿಕ್ಷಣವಂತರಾಗಬೇಕು ಎಂದರು.

ನಾಗರಾಜ ದೇಶಪಾಂಡೆ ಮಾತನಾಡಿ, ವಿದ್ಯಾರ್ಥಿಗಳು ಕೀಳರಿಮೆಯನ್ನು ತೊರೆದು ಉತ್ತಮ ಭವಿಷ್ಯ ರೂಪಿಸಿಕೊಳ್ಳಲು ಶಿಸ್ತು, ಸಮಯ ಪರಿಪಾಲನೆ, ಕಠಿಣ ಪರಿಶ್ರಮದಿಂದ ಸಾಧ್ಯವಾಗುತ್ತದೆ ಎಂದರು.

ಅಧ್ಯಕ್ಷತೆಯನ್ನು ಪ್ರಾಚಾರ್ಯ ಆರ್.ಎಂ. ಕಲ್ಲನಗೌಡರ ವಹಿಸಿದ್ದರು. ಅನುಪಮಾ, ರಾಜು ಬಿ.ಕೆ, ಸಿ.ಎಸ್. ತೋಟಿ, ವಿನಾಯಕ ಬಿ, ಡಾ. ಶಿವಪ್ಪ ಮುದಿಯಜ್ಜನವರ ಇದ್ದರು.

### ಅವೈಜ್ಞಾನಿಕ ಒಳಮೀಸಲಾತಿ ವರ್ಗೀಕರಣ । 11ನೇ ದಿನದತ್ತ ಅಹೋರಾತ್ರಿ ಧರಣಿ

# ಬಂಜಾರರ ಭವಿಷ್ಯಕ್ಕೆ ಮರಣ ಶಾಸನ

■ವಿಜಯಸಾಕ್ಷಿ ಸುದ್ದಿ, ಗದಗ

ಪರಿಶಿಷ್ಟ ಜಾತಿಗಳಲ್ಲಿನ ಅವೈಜ್ಞಾನಿಕ ಒಳಮೀಸಲಾತಿ ವರ್ಗೀಕರಣದ ವಿರುದ್ಧ ಕರ್ನಾಟಕ ಬಂಜಾರ ಹಕ್ಕು ಸಂರಕ್ಷಣಾ ಸಮಿತಿ ಹಾಗೂ ಜಿಲ್ಲಾ ಬಂಜಾರ ಸಮುದಾಯದ ವಿವಿಧ ಸಂಘಟನೆಗಳ ಸಂಯುಕ್ತ ಆಶ್ರಯದಲ್ಲಿ ನಗರದ ಗಾಂಧಿ ವೃತ್ತದಲ್ಲಿ ನಡೆಯುತ್ತಿರುವ ಬೃಹತ್ ಪ್ರತಿಭಟನೆ ಹಾಗೂ ಅನಿರ್ದಿಷ್ಟಾವಧಿ ಅಹೋರಾತ್ರಿ ಧರಣಿ ಗುರುವಾರ 11ನೇ ದಿನದತ್ತ ತಲುಪಿದೆ.

ಬುಧವಾರ ಗದಗ ಜಿಲ್ಲೆಯ 72 ತಾಂಡಾಗಳ ಪೈಕಿ ನಿಗದಿತ ವೇಳಾಪಟ್ಟಿಯಂತೆ ಯಲಿಶಿರುಂಜ್, ಅತ್ತಿಕಟ್ಟಿ ತಾಂಡಾ, ಬೂದಿಹಾಳ, ಕುಂದ್ರಳ್ಳಿ, ಯಲ್ಲಾಪುರ ತಾಂಡಾ, ನಾಗರಸಕೊಪ್ಪ, ಕಣವಿ ತಾಂಡಾಗಳ ನೂರಾರು ಬಂಜಾರರು ಧರಣಿ ಸ್ಥಳಕ್ಕೆ ಆಗಮಿಸಿ ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು.

ಈ ಸಂದರ್ಭದಲ್ಲಿ ಪ್ರತಿಭಟನಾಕಾರರು ಕಿತ್ತೂರು ರಾಣಿ ಚನ್ನಮ್ಮ ವೃತ್ತದಿಂದ ಜಿಲ್ಲಾಧಿಕಾರಿಗಳ ಕಚೇರಿಯವರೆಗೆ ಲವಣವನ್ನು(ಉಪ್ಪು) ಎತ್ತಿನ ಬಂಡಿಯಲ್ಲಿ ತಂದು ಅಲ್ಲಲ್ಲಿ ಕುಳಿತು ಉಪ್ಪನ್ನು ಮಾರುತ್ತಾ ಬಂಜಾರ ಜನಾಂಗ ಆರ್ಥಿಕವಾಗಿ ಮತ್ತು ಶೈಕ್ಷಣಿಕವಾಗಿ ಹಿಂದುಳಿದ ಸಮುದಾಯವೆಂದು ತಮ್ಮ ಹಿಂದಿನ ಕಸಬನ್ನು ಮಾಡುತ್ತಾ ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗಿ, ಒಳಮೀಸಲಾತಿ ವರ್ಗೀಕರಣದಲ್ಲಿ ಸರ್ಕಾರ ಬಂಜಾರ ಸಮುದಾಯಕ್ಕೆ ಘೋರ ಅನ್ಯಾಯ ಮಾಡಿದೆ ಎಂದು ಖಂಡಿಸಿದರು.

ಕರ್ನಾಟಕ ಬಂಜಾರ ಹಕ್ಕು ಸಂರಕ್ಷಣಾ ಸಮಿತಿಯ ರಾಜ್ಯ ಪ್ರಧಾನ ಕಾರ್ಯದರ್ಶಿ ರವಿಕಾಂತ್ ಅಂಗಡಿ ಮಾತನಾಡಿ, ಬಂಜಾರ ಜನಾಂಗ ಶೈಕ್ಷಣಿಕವಾಗಿ ಮತ್ತು ಆರ್ಥಿಕವಾಗಿ ಹಿಂದುಳಿದಿದ್ದು, ಹಿಂದಿನ ಕಾಲದಲ್ಲಿ ಬಂಜಾರ ಜನಾಂಗ ಊರಿಂದ ಊರಿಗೆ ಹೋಗಿ ಉಪ್ಪನ್ನು ಮಾರಿ ಜೀವನ ಸಾಗಿಸುತ್ತಿದ್ದರು. ಈ ದೇಶಕ್ಕೆ ಲಮನ್ ಮಾರ್ಗಗಳನ್ನು ಕೊಟ್ಟ ಜನಾಂಗಕ್ಕೆ ಸರ್ಕಾರ ಪರಿಶಿಷ್ಟ ಜಾತಿಗಳ ಅವೈಜ್ಞಾನಿಕ ಒಳಮೀಸಲಾತಿ ವರ್ಗೀಕರಣ ಮಾಡಿ ಬಂಜಾರ ಸಮುದಾಯದ ಭವಿಷ್ಯಕ್ಕೆ ಮರಣ ಶಾಸನ ಬರೆದಿದೆ. ಹಾಗಾಗಿ ಸರ್ಕಾರ ಬಂಜಾರ ಸಮುದಾಯಕ್ಕೆ ಆಗಿರುವ ಅನ್ಯಾಯವನ್ನು ಕೂಡಲೇ ಸರಿಪಡಿಸಬೇಕು ಎಂದು ಆಗ್ರಹಿಸಿದರು.

ಯಲಿಶಿರುಂಜ್, ಅತ್ತಿಕಟ್ಟಿ ತಾಂಡಾ, ಬೂದಿಹಾಳ, ಕುಂದ್ರಳ್ಳಿ, ಯಲ್ಲಾಪುರ ತಾಂಡಾ, ನಾಗರಸಕೊಪ್ಪ, ಕಣವಿ ತಾಂಡಾಗಳ ಬಂಜಾರ ಸಮುದಾಯದ ಮುಖಂಡರು, ನಾಯಕರು, ಕಾರಭಾರಿಗಳು ಹಾಗೂ ಹಿರಿಯರು ಪಂಚರ ನೇತೃತ್ವದಲ್ಲಿ ಹೋರಾಟದಲ್ಲಿ ಪಾಲ್ಗೊಂಡರು.

ಈ ಸಂದರ್ಭದಲ್ಲಿ ರವಿಕಾಂತ ಅಂಗಡಿ, ಕೆ.ಸಿ. ನಭಾಪುರ, ಐ.ಎಸ್. ಪೂಜಾರ, ಟಿ.ಡಿ. ಪೂಜಾರ, ಧನುರಾಮ ತಂಬೂರಿ, ಕೃಷ್ಣಪ್ಪ ಲಮಾಣಿ, ಸಂತೋಷ ಪವಾರ್, ಆಗ್ರಪ್ಪ ನಾಯಕ್, ಚೆನ್ನಪ್ಪ ಕಾರಭಾರಿ, ಶಿವಪ್ಪ ಲಮಾಣಿ, ಶಶಿಕುಮಾರ್ ಜಾದವ್, ಧನ್ನುರಾಮ್ ತಂಬೂರಿ, ರಮೇಶ್ ಪವಾರ್, ಕಿರಣ್ ರಾಠೋಡ್, ಭೀಮಪ್ಪ ನಾಯಕ್, ಭೋಜಪ್ಪ ಲಮಾಣಿ, ವಿಠ್ಠಲ್ ಕಾರಭಾರಿ, ಹಾಮಜಪ್ಪ ಬಡಿಗೇರ್, ಕುಶಾಲ್ ರಾಠೋಡ್, ಧಾಮಲಪ್ಪ ನಾಯಕ್, ಲಕ್ಷ್ಮಣ ನಾಯಕ್, ಪರಮೇಶ್ ಲಮಾಣಿ, ಲಕ್ಷ್ಮಣ ಲಮಾಣಿ, ಭೋಜಪ್ಪ ನಾಯಕ್, ದ್ಯಾಮಣ್ಣ ಕಾರಭಾರಿ, ಹರಿಯಪ್ಪ, ಉಮೇಶ್ ನಾಯಕ್, ಪರಮೇಶ್ ಕಾರಭಾರಿ, ನರಸಪ್ಪ ಡಾವ, ಶೇಖಪ್ಪ ನಾಯಕ್, ಗೆಮಪ್ಪ ಕಾರಭಾರಿ ಹಾಗೂ ಗೋವಿಂದ ಲಮಾಣಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.



ಗುರುವಾರ ಸೇವಾಲಾಲ ನಗರ, ಹುಲಕೋಟಿ, ಜಾಲವಾಡಗಿ, ಶೆಟ್ಟಿಗೆರೆ, ನೀಲೋಗಲ್, ದೋಡ್ಡೂರ, ನೆಲ್ಲೂರ ತಾಂಡಾಗಳ ಬಂಜಾರರು ಬೆಳಿಗ್ಗೆ 11 ಗಂಟೆಗೆ ಗದಗ ನಗರದ ಚನ್ನಮ್ಮ ವೃತ್ತದಿಂದ ಸರ್ಕಾರದ ವಿರುದ್ಧ ದಂಡ್ ಚಳುವಳಿ (ಹೋಳಿ ಲೆಂಗಿ) ಮೂಲಕ ಪ್ರತಿಭಟನೆ ನಡೆಸಿ, ಜಿಲ್ಲಾಧಿಕಾರಿಗಳ ಕಚೇರಿಗೆ ತೆರಳಿ ಅಹೋರಾತ್ರಿ ಧರಣಿಯಲ್ಲಿ ಭಾಗವಹಿಸಲಿದ್ದಾರೆ.

# ಕನ್ನಡ ರಾಜ್ಯೋತ್ಸವ, ಭಗತಸಿಂಗ್ ಜಯಂತ್ಯುತ್ಸವದ ಪೂರ್ವಭಾವಿ ಸಭೆ



■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಬಾಲಗಂಗಾಧರ ತಿಲಕ್ ಪಾರ್ಕ್‌ನಲ್ಲಿ ಭಗತಸಿಂಗ್ ಅಭಿಮಾನಿ ಬಳಗದಿಂದ ನಡೆದ ಪೂರ್ವಭಾವಿ ಸಭೆಯಲ್ಲಿ ನವೆಂಬರ್ 9ರಂದು ಕನ್ನಡ ರಾಜ್ಯೋತ್ಸವ ಮತ್ತು ಭಗತಸಿಂಗ್ ಜಯಂತ್ಯುತ್ಸವವನ್ನು ಆಚರಣೆ ಮಾಡಲು ನಿರ್ಧರಿಸಲಾಯಿತು.

ಬಳಗದ ಜಿಲ್ಲಾ ಪ್ರಮುಖರಾದ ಮಂಜುನಾಥ (ಸೋಮು) ಬ.ಮುಳಗುಂದ ಮಾತನಾಡಿ, ಕನ್ನಡ ರಾಜ್ಯೋತ್ಸವ ಹಾಗೂ ಭಗತಸಿಂಗ್ ಜಯಂತ್ಯುತ್ಸವದ ಅಂಗವಾಗಿ ಸಮಿತಿಯನ್ನು ರಚಿಸಲು ಸಲಹೆ-ಸೂಚನೆ ನೀಡಿದರು.

ಸಭೆಯಲ್ಲಿ ಎಲ್ಲ ಸದಸ್ಯರ ಸಮ್ಮತಿಯಿಂದ 2025ರ ಸಮಿತಿಯನ್ನು ರಚನೆ ಮಾಡಲಾಯಿತು. ಸಮಿತಿಯ ಅಧ್ಯಕ್ಷರಾಗಿ ಮಂಜುನಾಥ ಹುಡೇದ, ಗೌರವಾಧ್ಯಕ್ಷರಾಗಿ ಬಸವರಾಜ ಗುಡದೂರ, ಉಪಾಧ್ಯಕ್ಷರಾಗಿ ಶಿವಣ್ಣ ಬಿ.ಎಂ, ಮಹಾಂತೇಶ ಬಿ.ಕೆ, ಕಾರ್ಯದರ್ಶಿಯಾಗಿ ಸಾಲಿಮಠ ಆರ್.ಬಿ, ಸಹ ಕಾರ್ಯದರ್ಶಿಯಾಗಿ ವಾಲ್ಮೀಕಿ ಸಿ.ಎಚ್, ಮಹಾಂತೇಶ ಎನ್.ಎಚ್, ಮಂಜು ಎಂ.ಎಸ್, ಖಜಾಂಚಿಯಾಗಿ ನಾಗರಾಜ ಟಿ.ಜಿ, ನವಲಿಮಠ ಎಂ.ಎಂ, ಸದಸ್ಯರಾಗಿ ಪರಶು ಜಿ, ಅಮಿತ ವಿ.ಎಚ್, ಕುಂಬಾರ ಬಿ.ಎಸ್, ಮಹಾಂತೇಶ ಎನ್.ಪಿ, ಕಿರಣ ಎಂ, ವಿನಾಯಕ ಜಿ, ಮಹೇಶ ಎಚ್, ಸಂತೋಷ ಬಿ, ವಿಷ್ಣು ಆರ್.ಎ ಅವರನ್ನು ನೇಮಿಸಲಾಯಿತು.

ಕಾರ್ಯಕ್ರಮದ ನಿಮಿತ್ತ ಅನ್ನಸಂತರ್ಪಣೆ, ಸರಕಾರಿ ಶಾಲಾ ವಿದ್ಯಾರ್ಥಿಗಳಿಗೆ ನೋಟ್‌ಬುಕ್ ವಿತರಣೆ, ವೇದಿಕೆ ಕಾರ್ಯಕ್ರಮ, ದೇಶಭಕ್ತಿ ಹಾಗೂ ನಾಡಭಕ್ತಿ ಗೀತೆಗಳು, ಸ್ವಾಮೀಜಿಗಳನ್ನು, ವೀರಯೋಧರನ್ನು, ಗಣ್ಯರನ್ನು ಆಹ್ವಾನಿಸಿ, ಕಾರ್ಯಕ್ರಮ ಏರ್ಪಡಿಸಲು ನಿರ್ಧಾರ ಕೈಗೊಳ್ಳಲಾಯಿತು.

ಈ ಸಂದರ್ಭದಲ್ಲಿ ರವಿ ಹುಡೇದ, ಮಂಜುನಾಥ ಹಿತ್ತಲನಿ, ಅಭಿಷೇಕ, ಕಾರ್ತಿಕ, ವಿನಾಯಕ, ಈಶ್ವರ, ಸುನೀಲ, ವಿನಯ, ರಾಜು, ಪ್ರಕಾಶ, ಬಸು, ಮಂಜು, ಕಿರಣ, ಚೇತನ, ಸತೀಶ, ಸಂತೋಷ ಮುಂತಾದವರು ಪಾಲ್ಗೊಂಡಿದ್ದರು.

# ಜೂಜಾಟ ನಿಷೇಧಿಸಲು ಒತ್ತಾಯಿಸಿ ಮನವಿ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲೆಯಾದ್ಯಂತ ದೀಪಾವಳಿ ಹಬ್ಬದ ನೆಪದಲ್ಲಿ ಎಲ್ಲ ಅಂಗಡಿ, ಮನೆ ಹಾಗೂ ಫುಟ್‌ಪಾತ್‌ನಲ್ಲಿ ಪೆಂಡಾಲ್ ಹಾಕಿ, ಸುತ್ತಲೂ ಪರದೆ ಕಟ್ಟಿ ರಾಜಾರೋಷವಾಗಿ ಇಸ್ಪೇಟ್, ಜೂಜಾಟ ಯಾರ ಭಯವಿಲ್ಲದೇ ನಡೆಯುತ್ತದೆ.

ಬರಗಾಲದ ಪರಿಸ್ಥಿತಿಯಿಂದ ಸಾವಿರಾರು ಕುಟುಂಬಗಳು ಸಂಕಷ್ಟದಲ್ಲಿರುವಾಗ ಈ ಇಸ್ಪೇಟ್ ಹಾಗೂ ಜೂಜಾಟದಿಂದ ಬಹಳಷ್ಟು ಕುಟುಂಬಗಳು ಹಣ ಕಳೆದುಕೊಳ್ಳುವುದರೊಂದಿಗೆ ಸಾಲ ಮಾಡಿ ಸಮಸ್ಯೆಗಳ ಸುಳಿಗೆ ಸಿಲುಕಿ, ಮನೆಯಲ್ಲಿರುವ ಬೆಲೆಬಾಳುವ ವಸ್ತುಗಳನ್ನು, ಮಹಿಳೆಯರ ತಾಳಿಯನ್ನು ಕೂಡಾ ಅಡುವಿಟ್ಟು ಜೂಜಾಟವಾಡುತ್ತಿರುವುದರಿಂದ ತಾಯಂದಿರು ಹಾಗೂ ಮಹಿಳೆಯರು ಕಣ್ಣೀರಲ್ಲಿ ಕೈತೊಳೆಯುತ್ತಿದ್ದಾರೆ. ಎಲ್ಲರ ಬಾಳಿನಲ್ಲಿ ಬೆಳಕು ಚಲ್ಲುವ ದೀಪಾವಳಿ ಹಬ್ಬದ ದಿನವೇ ಸಾವಿರಾರು ಕುಟುಂಬಗಳು ಕಂಗಾಲಾಗಿ ಬೀದಿಗೆ ಬೀಳುತ್ತಿರುವುದು ವಿಷಾದನೀಯ ಸಂಗತಿಯಾಗಿದೆ ಎಂದು ಮಾನವ ಹಕ್ಕುಗಳು ಹಾಗೂ ಭ್ರಷ್ಟಾಚಾರ ವಿರೋಧಿ ಸಂಸ್ಥೆ ದೆಹಲಿಯ ಗದಗ ಜಿಲ್ಲಾ ಘಟಕದ ಕಾರ್ಯದರ್ಶಿ ಮಂಜುನಾಥ ದು.ಹದ್ದಣ್ಣವರ ಮನವಿ ಮಾಡಿದರು.

ಪೊಲೀಸ್ ವರಿಷ್ಠಾಧಿಕಾರಿಗಳ ಕಚೇರಿಯಲ್ಲಿ ಮನವಿ ಸಲ್ಲಿಸಿ ಮಾತನಾಡಿ, ಈ ಬಗ್ಗೆ ಕಾನೂನಾತ್ಮಕ ಕ್ರಮ ಕೈಗೊಂಡು ಇಸ್ಪೇಟ್ ಜೂಜಾಟ ರಹಿತ ದೀಪಾವಳಿ ಹಬ್ಬ ಆಚರಿಸುವಲ್ಲಿ ಕ್ರಮ ಕೈಗೊಳ್ಳುವುದರ ಮೂಲಕ ಸಾವಿರಾರು ಕುಟುಂಬಗಳಿಗೆ ದೀಪಾವಳಿ ಹಬ್ಬದ ಬೆಳಕು ನೀಡುವ ಕಾರ್ಯವಾಗಬೇಕೆಂದು ಮನವಿ ಮಾಡಿದರು.

ಸಂಸ್ಥೆಯ ರಾಜ್ಯ ಹಿಂದುಳಿದ ವಿಭಾಗದ ಕಾರ್ಯದರ್ಶಿ ಶೈಲೇಂದ್ರ ಶೆಂಬೇಕರ, ಗದಗ ಜಿಲ್ಲಾ ಘಟಕದ ಜಿಲ್ಲಾಧ್ಯಕ್ಷ ಪ್ರಕಾಶ ಬನ್ನಿಗಿಡದ, ಉಪಾಧ್ಯಕ್ಷ ಹನಮಂತ ಪಲದೊಡ್ಡಿ, ಕಾರ್ಯದರ್ಶಿ ಶೇಖಸಾಬ ಕಾತರಕಿ, ಮೀಡಿಯಾ ಕಾರ್ಯದರ್ಶಿ ಯಾಸೀನಸಾಬ್ ಬೊಡ್ಲೇಖಾನ, ಡಾ. ಸಿ.ಎಸ್. ಹನಮಂತಗೌಡ್ರ, ಸಂಘಟನಾ ಕಾರ್ಯದರ್ಶಿ ಮಂಜುನಾಥ ಆಸಂಗಿ, ಶಂಕರಗೌಡ ಪಾಟೀಲ, ಕಿರಣ ಶೆಂಬೇಕರ, ಸುರಜ ಶೆಂಬೇಕರ, ಸೋಮಶೇಖರ್ಯ ಕಂಬಿಮಠ, ಈರಣ್ಣಾ ಮಲ್ಲಾಡದ ಸಾಮಾಜಿಕ ಕಾರ್ಯಕರ್ತರಾದ ಇಬ್ರಾಹಿಂಸಾಬ ದಾವಲಖಾನ, ಮನಸೂರ ಅಹ್ಮದ ಶಿರಹಟ್ಟಿ, ರಾಜೇಸಾಬ ಬೊಡ್ಲೇಖಾನ, ಇಸ್ಮಾಯಿಲ್ ಬದಾಮಿ, ಮುಸ್ತಾಕಅಹ್ಮದ ಧಾರವಾಡ, ಹಜರತಸಾಬ ಬಾಗಲಿ, ಸಬ್ಬೀಅಹ್ಮದ ಬದಾಮಿ, ಉಸ್ಮಾನಗಣಿ ಬದಾಮಿ, ಬಸೀರಅಹ್ಮದ ಚಿನ್ನೂರ, ಇಮ್ತಿಯಾಜಅಹ್ಮದ ಟೇಲರ, ಇಫತ್ತೇಕಾರ ಬೆಲೇರಿ ಇದ್ದರು.



# ಜಿ.ಎಸ್. ಪಾಟೀಲರಿಗೆ ಸಚಿವ ಸ್ಥಾನ ನೀಡಿ

■ವಿಜಯಸಾಕ್ಷಿ ಸುದ್ದಿ, ಡಂಬಳ

ರೋಣ ವಿಧಾನಸಭಾ ಮತಕ್ಷೇತ್ರದ ಶಾಸಕ ಜಿ.ಎಸ್. ಪಾಟೀಲರಿಗೆ ಸಚಿವ ಸಂಪುಟ ವಿಸ್ತರಣೆಯಲ್ಲಿ ಸಚಿವ ಸ್ಥಾನ ನೀಡಬೇಕೆಂದು ಮುಂಡರಗಿ ತಾಲೂಕಾ ಕೆಪಿಸಿಸಿಯ ಎಸ್‌ಸಿ ಘಟಕದ ಅಧ್ಯಕ್ಷ ಮರಿಯಪ್ಪ ಸಿದ್ದಣ್ಣವರ ಆಗ್ರಹಿಸಿದ್ದಾರೆ.

ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ಜಿ.ಎಸ್. ಪಾಟೀಲರು ರೋಣ ಕ್ಷೇತ್ರದಲ್ಲಿ 4 ಬಾರಿ ಶಾಸಕರಾಗಿ, ಗದಗ ಜಿಲ್ಲಾ ಕಾಂಗ್ರೆಸ್‌ಗೆ 8 ವರ್ಷದಿಂದ ಅಧ್ಯಕ್ಷರಾಗಿ ಸೇವೆ ಸಲ್ಲಿಸುತ್ತಿದ್ದಾರೆ. ಎಲ್ಲಾ ಧರ್ಮೀಯರೊಂದಿಗೆ ಉತ್ತಮ ಬಾಂಧವ್ಯ ಹೊಂದಿದ್ದು, ರೈತರ ಸಮಸ್ಯೆಗಳಿಗೆ ಸ್ಪಂದಿಸುವ ಹೃದಯವಂತರು, ಕೆರೆಗಳಿಗೆ ನೀರು ಹರಿಸುವುದರ ಮೂಲಕ ರೈತರ ಹೃದಯ ಗೆದ್ದ ಜನನಾಯಕರಾಗಿದ್ದಾರೆ.

ಅಷ್ಟೇ ಅಲ್ಲದೆ ಹಳೆ ಧಾರವಾಡ ಜಿಲ್ಲೆಯ ಪ್ರಬಲ ವೀರಶೈವ ಲಿಂಗಾಯತ ಹಿರಿಯ ರಾಜಕಾರಣಿ. ಸುಮಾರು 40 ವರ್ಷಗಳಿಂದ ವಿವಿಧ ಮಠಾಧೀಶರ ಜೊತೆ ಉತ್ತಮ ಬಾಂಧವ್ಯ ಹೊಂದಿದ್ದಾರೆ. ಶಿವಯೋಗ ಮಂದಿರದ ಟ್ರಸ್ಟ್ ಕಮಿಟಿಯ ಅಧ್ಯಕ್ಷರಾಗಿ 30 ವರ್ಷ ಸೇವೆ ಸಲ್ಲಿಸಿದ್ದಾರೆ. ರೋಣ ಕ್ಷೇತ್ರದಲ್ಲಿ ಹತ್ತು ಹಲವು ಅಭಿವೃದ್ಧಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುತ್ತಾ ಬರುತ್ತಿರುವ ಜಿ.ಎಸ್. ಪಾಟೀಲರಿಗೆ ಈ ಬಾರಿ ಸಚಿವ ಸ್ಥಾನ ನೀಡಬೇಕೆಂದು ಮರಿಯಪ್ಪ ಸಿದ್ದಣ್ಣವರ ಆಗ್ರಹಿಸಿದ್ದಾರೆ.

# ಮುಂಬರುವ ಬಿಹಾರ ವಿಧಾನಸಭಾ ಚುನಾವಣೆಯಲ್ಲಿ ಸ್ಪರ್ಧಿಸುವುದಿಲ್ಲ: ಪ್ರಶಾಂತ್ ಕಿಶೋರ್

■ವಿಜಯಸಾಕ್ಷಿ ಸುದ್ದಿ, ನವದೆಹಲಿ

ಮುಂಬರುವ ಬಿಹಾರ ವಿಧಾನಸಭಾ ಚುನಾವಣೆಯಲ್ಲಿ ಸ್ಪರ್ಧಿಸುವುದಿಲ್ಲ ಎಂದು ಜನ ಸುರಾಜ್ ಪಕ್ಷದ ಸಂಸ್ಥಾಪಕ ಪ್ರಶಾಂತ್ ಕಿಶೋರ್ ಘೋಷಿಸಿದ್ದಾರೆ. ಪಿಟಿಐ ಸಂದರ್ಶನದಲ್ಲಿ ಮಾತನಾಡಿರುವ ಅವರು, ನಾನು ಈ ಬಾರಿ ವಿಧಾನಸಭೆ ಚುನಾವಣೆಗೆ ಸ್ಪರ್ಧಿಸಬಾರದು ಎಂದು ಪಕ್ಷ ನಿರ್ಧರಿಸಿದೆ.

ಈ ಹಿನ್ನೆಲೆಯಲ್ಲಿ ರಾಘೋಪುರ್‌ನಿಂದ ತೇಜಸ್ವಿ ಯಾದವ್ ವಿರುದ್ಧವಾಗಿ ಪಕ್ಷದಿಂದ ಬೇರೆ ಅಭ್ಯರ್ಥಿಯನ್ನು ಘೋಷಿಸಿದೆ. ಪಕ್ಷದ ಹಿತಾಸಕ್ತಿ ಹಿನ್ನೆಲೆ ಈ ನಿರ್ಧಾರ ಕೈಗೊಳ್ಳಲಾಗಿದೆ. ಒಂದು ವೇಳೆ ನಾನು ಸ್ಪರ್ಧಿಸಿದರೆ, ಇದರಿಂದ ಪಕ್ಷದ ಅಗತ್ಯ ಸಂಘಟನಾ ಕೆಲಸದಿಂದ ದೂರವಾದಂತೆ ಆಗುತ್ತದೆ ಎಂದರು.

243 ಸದಸ್ಯ ಬಲದ ವಿಧಾನಸಭೆಗೆ ನಡೆಯಲಿರುವ ಚುನಾವಣೆಯಲ್ಲಿ ಗೆಲುವಿನ ಗುರಿಯ ಬಗ್ಗೆ ಮಾತನಾಡಿದ ಅವರು, 150ಕ್ಕಿಂತ ಕಡಿಮೆ ಸ್ಥಾನಗಳನ್ನು ಗೆದ್ದರೆ ಅದು ತಮಗೆ ವೈಯಕ್ತಿಕ ಸೋಲು ಎಂದು ಅಭಿಪ್ರಾಯಪಟ್ಟಿದ್ದಾರೆ. ಜನ ಸುರಾಜ್ ಪಕ್ಷವು 150ಕ್ಕೂ ಹೆಚ್ಚು ಸ್ಥಾನಗಳನ್ನು ಪಡೆದರೆ, ಅದು ಬಿಹಾರದ ಜನರ ನಿಜವಾದ ಗೆಲುವಾಗಲಿದೆ ಎಂದು ಅವರು ಅಭಿಪ್ರಾಯಪಟ್ಟಿದ್ದಾರೆ.



# ಗ್ರಾಮೀಣ ಮಹಿಳೆಯರು ಸ್ವಾವಲಂಬಿಗಳಾಗಿ



■ವಿಜಯಸಾಕ್ಷಿ ಸುದ್ದಿ, ಗದಗ

ಸ್ವ ಉದ್ಯೋಗದೊಂದಿಗೆ ಗ್ರಾಮೀಣ ಭಾಗದ ಮಹಿಳೆಯರು ಸ್ವಾವಲಂಬನೆಯತ್ತ ಹೆಜ್ಜೆ ಇಡಬೇಕು ಎಂದು ಕೃಷಿ ಇಲಾಖೆಯ ಉಪ ಕೃಷಿ ನಿರ್ದೇಶಕಿ ಸ್ಫೂರ್ತಿ ಜಿ.ಎಸ್ ಅಭಿಪ್ರಾಯಪಟ್ಟರು.

ಅವರು ಮುಳಗುಂದ ವಿಶ್ವ ಬ್ಯಾಂಕ್ ನೆರವಿನ ರಿವಾರ್ಡ್ ಯೋಜನೆಯಡಿಯಲ್ಲಿ ನಡೆದ ಉದ್ಯಮಶೀಲತಾ ಅರಿವು ಕಾರ್ಯಕ್ರಮದಲ್ಲಿ ಮಾತನಾಡಿದರು.

ರಿವಾರ್ಡ್ ಯೋಜನೆಯಡಿ ಸ್ವಸಹಾಯ ಸಂಘಗಳ ಮಹಿಳೆಯರಿಗೆ ಆರ್ಥಿಕ ಸಬಲೀಕರಣ ನೀಡುವ ಉದ್ದೇಶದಿಂದ ಆರ್‌ಸೆಟಿ ಸಹಯೋಗದಲ್ಲಿ ಸ್ವಉದ್ಯೋಗ ತರಬೇತಿಯನ್ನು ನೀಡಲಾಗುತ್ತದೆ. ತರಬೇತಿಗಳ ಕುರಿತಂತೆ ವಿವರವಾದ ಮಾಹಿತಿ ನೀಡಲಾಗಿದ್ದು, ತರಬೇತಿಗಳ ಪ್ರಯೋಜನ ಪಡೆದುಕೊಳ್ಳಲು ಮಹಿಳೆಯರು ಮುಂದಾಗಬೇಕು ಎಂದರು.

ಆರ್‌ಸೆಟಿ ವತಿಯಿಂದ ನೀಡಲಾಗುವ ತರಬೇತಿಗಳು ಹಾಗೂ ಅವುಗಳ ಪ್ರಯೋಜನಗಳ ಬಗ್ಗೆ ನವೀನ್ ಹಿರೇಗೌಡ್ರ ಮಾಹಿತಿ ನೀಡಿದರು. ಶೇಖರ್ ನಾಯಕ ಮಾತನಾಡಿ, ಎಲ್ಲಾ ಸ್ವಸಹಾಯ ಸಂಘಗಳು ತಮ್ಮ ಸಂಘಗಳ ದಾಖಲಾತಿಗಳನ್ನು ಸೂಕ್ತವಾಗಿ ನಿರ್ವಹಿಸಬೇಕು. ಅಂದಾಗ ಮಾತ್ರ ಯೋಜನೆಯ ಲಾಭ ಪಡೆಯಲು ಸಾಧ್ಯ ಎಂದು ಹೇಳಿದರು.

ಕೃಷಿ ಅಧಿಕಾರಿ ರಾಜರಾಜೇಶ್ವರಿ ಸಜ್ಜನರ, ಆರ್‌ಸೆಟಿ ನಿರ್ದೇಶರಾದ ಶಿವಕುಮಾರ್, ಮಂಜುನಾಥ ಬ್ಯಾಳಿ ಸೇರಿದಂತೆ ರಿವಾರ್ಡ್ ಯೋಜನೆಯ ಸಿಬ್ಬಂದಿ ಹಾಜರಿದ್ದರು.

# ಇನ್ಮುಂದೆ SSLC, ದ್ವಿತೀಯ ಪಿಯುಸಿಯಲ್ಲಿ ಶೇ. 33 ಅಂಕ ಬಂದ್ರೂ ಪಾಸ್: ಸಚಿವ ಮಧು ಬಂಗಾರಪ್ಪ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಕರ್ನಾಟಕ ರಾಜ್ಯದ ಶಿಕ್ಷಣ ವ್ಯವಸ್ಥೆಯಲ್ಲಿ ಮಹತ್ವದ ಬದಲಾವಣೆಯೊಂದಿಗೆ, ಎಸ್‌ಎಸ್‌ಎಲ್‌ಸಿ ಮತ್ತು ದ್ವಿತೀಯ ಪಿಯುಸಿ ಪರೀಕ್ಷೆಗಳಲ್ಲಿ ಉತ್ತೀರ್ಣರಾಗಲು ಶೇ. 33 ಅಂಕಗಳು ಸಾಕು ಎಂದು ಶಿಕ್ಷಣ ಸಚಿವ ಮಧು ಬಂಗಾರಪ್ಪ ಹೇಳಿದ್ದಾರೆ.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಸಚಿವರು, ಈ ನಿರ್ಧಾರವು ವಿದ್ಯಾರ್ಥಿಗಳ ಉತ್ತೀರ್ಣತಾ ಪ್ರಮಾಣ ಹೆಚ್ಚಿಸುವ ಮತ್ತು ಸಿಬಿಎಸ್‌ಇ ಹಾಗೂ ನೆರೆ ರಾಜ್ಯಗಳ ಏಕರೂಪ ಪದ್ಧತಿಯನ್ನು ರಾಜ್ಯದಲ್ಲಿ ಅಳವಡಿಸುವ ದೃಷ್ಟಿಯಿಂದ ತೆಗೆದುಕೊಳ್ಳಲಾಗಿದೆ.

ಪಾಸಿಂಗ್ ಮಾರ್ಕ್ಸ್ ಕಡಿತ ಮಾಡುವ ವಿಚಾರವನ್ನು ಶಾಲಾ ಪರೀಕ್ಷಾ ಮಂಡಳಿ ಕರಡು ಅಧಿಸೂಚನೆ ಮೂಲಕ ಸಾರ್ವಜನಿಕ ಡೊಮೇನ್‌ಗೆ ಹಾಕಿ ಅಭಿಪ್ರಾಯ ಕೇಳಿತ್ತು.

# ರಾಜು ತಾಳಿಕೋಟಿ ನಿಧನ ತುಂಬಲಾರದ ನಷ್ಟ

■ವಿಜಯಸಾಕ್ಷಿ ಸುದ್ದಿ, ಹೂವಿನಹಡಗಲಿ

ಹಾಸ್ಯ ನಟ, ವೃತ್ತಿ ರಂಗಭೂಮಿಯ ಹೆಸರಾಂತ ಕಲಾವಿದ ರಾಜು ತಾಳಿಕೋಟಿ ನಿಧನದಿಂದ ರಂಗಭೂಮಿಗೆ ತುಂಬಲಾರದ ನಷ್ಟವಾಗಿದೆ ಎಂದು ರಂಗಪೋಷಕ ಬೀರಬ್ಬಿ ಬಸವರಾಜ ಸಂತಾಪ ವ್ಯಕ್ತಪಡಿಸಿದರು.

ಪಟ್ಟಣದ ಸರ್ಕಾರಿ ನೌಕರರ ಭವನದಲ್ಲಿ ರಂಗಭೂಮಿ ಗೆಳೆಯರು, ಸಾಹಿತ್ಯಾಸಕ್ತರು, ಪತ್ರಕರ್ತರು, ಒಡನಾಡಿಗಳ ಸಹಯೋಗದಲ್ಲಿ ಹಮ್ಮಿಕೊಂಡಿದ್ದ 'ರಾಜು ತಾಳಿಕೋಟಿ ರಂಗ ನಮನ' ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ರಾಜು ತಾಳಿಕೋಟಿ ಅವರ ನಿಧನದಿಂದ ರಂಗಭೂಮಿ ಅನಾಥವಾಗಿದೆ. ಅವರ ನಾಟಕ 'ಕಲಿಯುಗದ ಕುಡಕ' ಸಾವಿರಕ್ಕೂ ಹೆಚ್ಚು ಪ್ರದರ್ಶನಗಳನ್ನು ಕಂಡು ದಾಖಲೆ ನಿರ್ಮಿಸಿದೆ. ಕುಡುಕನ ಪಾತ್ರ ರಾಜು ತಾಳಿಕೋಟಿಯವರಿಗೆ ಬಹಳಷ್ಟು ಹೆಸರು ತಂದು ಕೊಟ್ಟಿತ್ತು. ವೃತ್ತಿ ರಂಗಭೂಮಿ ನಾಟಕ ಕಂಪನಿಗಳು ಸಾಕಷ್ಟು ನಷ್ಟ, ಏಳು-ಬೀಳುಗಳ ನಡುವೆ ಜನರಿಗೆ ಮನರಂಜನೆ ನೀಡುವ ಪರಂಪರೆ ಮುಂದುವರೆಸಿವೆ ಎಂದು ಹೇಳಿದರು.

ಕನ್ನಡ ಜಾಗೃತಿ ಸಮಿತಿ ಜಿಲ್ಲಾ ಸದಸ್ಯ ಸುರೇಶ ಅಂಗಡಿ ಮಾತನಾಡಿ, ನಾಟಕಗಳಲ್ಲಿ, ಸಿನಿಮಾಗಳಲ್ಲಿ ಉತ್ತರ ಕನ್ನಡ ಭಾಷೆಯ ಸೊಗಡನ್ನು ಉಣಬಡಿಸಿದ ಅಪರೂಪದ ನಟ ರಾಜು ತಾಳಿಕೋಟಿ ಎಂದರು.

ಶಿಕ್ಷಕ, ರಂಗಭಾರತಿ ನಟ ಪಿ.ಎಂ. ಕೊಟ್ರಸ್ವಾಮಿ ಮಾತನಾಡಿ, ಧಾರವಾಡ ರಂಗಾಯಣದ ನಿರ್ದೇಶಕರಾಗಿ ಬಹುಭಾಷಾ ನಾಟಕೋತ್ಸವ ಆಯೋಜಿಸುವ ಕನಸನ್ನು ರಾಜು ಕಂಡಿದ್ದರು ಎಂದು ತಿಳಿಸಿದರು.

ಪತ್ರಕರ್ತರಾದ ಬಿಚ್ಚುಗತ್ತಿ ಖಾಜಾ ಹುಸೇನ್, ಎಂ.ದಯಾನಂದ, ದೇವೇಂದ್ರಪ್ಪ,

ಎಲ್. ಖಾದರ ಬಾಷಾ, ನಾಗರಾಜ್ ಮಲ್ಕಿಒಡೆಯರ್, ಗಾಯಕ ನಾಗೇಶ್ ಮುಂತಾದವರು ರಾಜು ತಾಳಿಕೋಟಿ ರಂಗ ಸೇವೆ ಕುರಿತು ಮಾಹಿತಿ ಹಂಚಿಕೊಂಡರು. ಶಾಖಾ ಗ್ರಂಥಾಲಯಾಧಿಕಾರಿ ಬಿ ನಾರಾಯಣ್, ಎಐಟಿಯುಸಿ ಸುರೇಶ ಹಲಗಿ, ಗುರುಸ್ವಾಮಿ ಡಿ.ಎಂ, ವೀರಯ್ಯ ಸ್ವಾಮಿ, ಸುಭಾಷ್ ಹೊಳಲು ಮುಂತಾದವರಿದ್ದರು.



# ಜಿ.ಪಿ.ಎಲ್ 3ನೇ ಆವೃತ್ತಿಯ ಟ್ರೋಫಿ, ಜರ್ಸಿ ಅನಾವರಣ



■ **ವಿಜಯಸಾಕ್ಷಿ ಸುದ್ದಿ, ಗದಗ**

ಜಿ.ಪಿ.ಎಲ್ ಸೀಸನ್-3ರ ಜರ್ಸಿ ಹಾಗೂ ಟ್ರೋಫಿ ಅನಾವರಣ ಮತ್ತು ಹರಾಜು ಪ್ರಕ್ರಿಯೆಯನ್ನು ಆದರ್ಶ ಶಿಕ್ಷಣ ಸಮಿತಿ ಕಾಲೇಜಿನಲ್ಲಿ ನಡೆಸಲಾಯಿತು. ಮುಖ್ಯ ಅತಿಥಿಗಳಾಗಿ ಡಾ. ಪ್ರಕಾಶ ಸಂಕನೂರ, ಭೂಷಣ ಪಿ.ಶಾಹ ಮತ್ತು ಆನಂದ ಪೋತ್ನಿಸ್ ಆಗಮಿಸಿದ್ದರು. ಜಿ.ಪಿ.ಎಲ್ ಸೀಸನ್-3ರ ಗದಗ ಸ್ಟ್ರೈಕರ್ಸ್ ತಂಡದ ಮಾಲೀಕರು-ಅಸ್ಲಮ್ ನರೇಗಲ್, ಗದಗ ಟೈಟನ್ಸ್ ತಂಡದ ಮಾಲೀಕರು-ಶೈಲೇಶ ಶಾಹ, ಗದಗ ವಲ್ಚರ್ಸ್ ತಂಡದ ಮಾಲೀಕರು-ಸಚಿನ್ ನಾಯಕ, ಗದಗ ಕ್ರಷರ್ಸ್ ತಂಡದ ಮಾಲೀಕರು-ಸಮೀರ ನದಿಮುಲ್ಲಾ ಸೇರಿದಂತೆ ನಾಲ್ಕು ತಂಡದ ಐಕಾನ್ ಆಟಗಾರರು ಭಾಗಿಯಾಗಿದ್ದರು.

ಹರಾಜು ಪ್ರಕ್ರಿಯೆಯಲ್ಲಿ ಆಟಗಾರರಾದ ಶಿವು ಕರಡಿ 31,000, ಶುಭಂ ಜೈನ್ 30,000, ರಾಮು ಬೆನಹಾಳ 18,000 ಅಂಕಗಳಿಗೆ ಹರಾಜಾದರು. ಟೂರ್ನಿಯು ನವೆಂಬರ್ ತಿಂಗಳಲ್ಲಿ ನಡೆಯಲಿವೆ. ಬಾಹುಬಲಿ ಜೈನರ್ ಹಾಗೂ ಶಶಿ ಮುಂಡರಗಿ ಕಾರ್ಯಕ್ರಮ ನಡೆಸಿಕೊಟ್ಟರು.

### ಐಎಂಎ ಗದಗ ಪದಾಧಿಕಾರಿಗಳ ಪದಗ್ರಹಣ ಸಮಾರಂಭದಲ್ಲಿ ಡಾ. ನಾ.ಸೋಮೇಶ್ವರ ಅಭಿಮತ

# ಸಮಸ್ಯೆಗೆ ಆತ್ಮಹತ್ಯೆಯೊಂದೇ ಪರಿಹಾರವಲ್ಲ




ಬೆಂಗಳೂರು ದೂರದರ್ಶನದ ಚಂದನ ವಾಹಿನಿಯಿಂದ ಪ್ರಸಾರಗೊಂಡ ಜನಪ್ರಿಯ 'ಥಟ್ ಅಂತ ಹೇಳಿ' ಕನ್ನಡದ ರಸಪ್ರಶ್ನೆ ಕಾರ್ಯಕ್ರಮ 4 ಜನವರಿ 2002ರಲ್ಲಿ ಆರಂಭಗೊಂಡು 23 ವರ್ಷಗಳಿಂದ 5 ಸಾವಿರಕ್ಕೂ ಅಧಿಕ ಸಂಚಿಕೆಗಳನ್ನು ಪೂರೈಸಿ ಗಿನ್ನಿಸ್ ವಿಶ್ವ ದಾಖಲೆಗೂ ಸೇರ್ಪಡೆಗೊಂಡಿದೆ. 15 ಸಾವಿರಕ್ಕೂ ಅಧಿಕ ಸ್ಪರ್ಧಿಗಳು ಭಾಗವಹಿಸಿದ್ದಾರೆ ಮತ್ತು 50 ಸಾವಿರಕ್ಕೂ ಹೆಚ್ಚು ಕನ್ನಡ ಪುಸ್ತಕಗಳನ್ನು ಬಹುಮಾನವಾಗಿ ನೀಡಲಾಗಿದೆ. ಇದು ಪವಾಡವೋ, ನನ್ನ ಪುಣ್ಯವೋ ತಿಳಿಯದಾಗಿದೆ.

**– ಡಾ. ನಾ.ಸೋಮೇಶ್ವರ.**
'ಥಟ್ ಅಂತ ಹೇಳಿ' ನಿರೂಪಕರು.

■ **ವಿಜಯಸಾಕ್ಷಿ ಸುದ್ದಿ, ಗದಗ**

ವಿದ್ಯಾರ್ಥಿಗಳು, ವಿಶೇಷವಾಗಿ ವೈದ್ಯಕೀಯ ವಿದ್ಯಾರ್ಥಿಗಳು ಮಾನಸಿಕ ಗೊಂದಲದಿಂದಾಗಿ ಖಿನ್ನತೆಗೆ ಒಳಗಾಗಿ ಆತ್ಮಹತ್ಯೆ ಮಾಡಿಕೊಳ್ಳುತ್ತಿರುವದು ಆತಂಕಕಾರಿ ಸಂಗತಿಯಾಗಿದೆ. ಇಂತಹ ವಿದ್ಯಾರ್ಥಿಗಳಿಗೆ ಆಪ್ತ ಸಮಾಲೋಚನೆ ನಡೆಸಿ ಅವರಲ್ಲಿ ಆತ್ಮಸ್ಥೈರ್ಯ ತುಂಬುವ ಕಾರ್ಯ ಆಗಬೇಕಿದೆ ಎಂದು ಸಾಹಿತಿ, ನಿರೂಪಕ ಡಾ. ನಾ.ಸೋಮೇಶ್ವರ ಹೇಳಿದರು.

ನಗರದ ಖಾಸಗಿ ಹೋಟೆಲ್ ಸಭಾಂಗಣದಲ್ಲಿ ಏರ್ಪಡಿಸಿದ್ದ ಐಎಂಎ ಗದಗ ಶಾಖೆಯ ನೂತನ ಪದಾಧಿಕಾರಿಗಳ ಪದಗ್ರಹಣ ಸಮಾರಂಭದ ಮುಖ್ಯ ಅತಿಥಿಯಾಗಿ ಪಾಲ್ಗೊಂಡು ಅವರು ಮಾತನಾಡಿದರು.

ಕೆಲವೊಮ್ಮೆ ಪಾಲಕ/ಪೋಷಕರ ಒತ್ತಾಸೆಯ ಮೇರೆಗೆ ವೈದ್ಯಕೀಯ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳು ಆರ್ಥಿಕ, ಕೌಟುಂಬಿಕ, ಒತ್ತಡ ಹಾಗೂ ಇನ್ನಿತರ ಕಾರಣಗಳಿಂದಾಗಿ ಖಿನ್ನತೆಗೆ ಒಳಗಾಗಿ ಆತ್ಮಹತ್ಯೆ ಮಾಡಿಕೊಳ್ಳುವರು. ಆತ್ಮಹತ್ಯೆಯೊಂದೇ ಸಮಸ್ಯೆಗೆ ಪರಿಹಾರವಲ್ಲ. ಖಿನ್ನತೆಗೆ ಒಳಗಾದ ವಿದ್ಯಾರ್ಥಿಗಳಿಗೆ ವೈದ್ಯಕೀಯ ಮಹಾವಿದ್ಯಾಲಯದಲ್ಲಿ ತಜ್ಞ ವೈದ್ಯರಿಂದ ಆಪ್ತಸಮಾಲೋಚನೆ, ಐಎಂಎದಿಂದ ಆತ್ಮಸ್ಥೈರ್ಯ ತುಂಬಿ ವಿದ್ಯಾಭ್ಯಾಸಕ್ಕೆ ಪ್ರೋತ್ಸಾಹಿಸುವ ಕಾರ್ಯ ಆಗಬೇಕಿದೆ. ಈ ರೀತಿಯ ಕಾರ್ಯ ಗದುಗಿನಿಂದ ಆರಂಭಗೊಂಡು ರಾಜ್ಯದಲ್ಲಿ ಆಂದೋಲನದ ರೀತಿಯಲ್ಲಿ ನಡೆಯಲಿ ಎಂದರು. ಐಎಂಎ ರಾಜ್ಯ ಘಟಕದ ನಿಕಟಪೂರ್ವ ಅಧ್ಯಕ್ಷ ಡಾ. ಮಧುಸೂಧನ್ ಕಾರಿಗನೂರ ನೂತನ ಪದಾಧಿಕಾರಿಗಳಿಗೆ ಪದಗ್ರಹಣ ನೆರವೇರಿಸಿ ಮಾತನಾಡಿ, ರಾಜ್ಯ ಐಎಂಎಗೆ ಗದಗ ಐಎಂಎ ಬಹು ದೊಡ್ಡ ಕೊಡುಗೆ ನೀಡಿದೆ. ಜೊತೆಗೆ ರಾಜ್ಯ ಐಎಂಎ ಅಧ್ಯಕ್ಷ ಸ್ಥಾನಕ್ಕೆ ಗದುಗಿನದ್ದೇ ಸಿಂಹಪಾಲಿದೆ ಎಂದರಲ್ಲದೆ, ಐಎಂಎ ಗದಗ ಶಾಖೆಯು ಶತಮಾನೋತ್ಸವದ ಸಂಭ್ರಮದ ವರ್ಷಾಚರಣೆಗೆ ಸಜ್ಜಾಗಿರುವದು ಸಂತೋಷ ತಂದಿದೆ ಎಂದರು. ಗದಗ ಐಎಂಎ ರಾಜ್ಯ, ರಾಷ್ಟ್ರ ಐಎಂಎಗೆ ಮಾದರಿ ಆಗುವಂತೆ ಕ್ರಿಯಾಶೀಲತೆಯಿಂದ ಕಾರ್ಯ ನಿರ್ವಹಿಸುವ ಮೂಲಕ ಶತಮಾನೋತ್ಸವವನ್ನು ವೈದ್ಯಕೀಯ ಕ್ಷೇತ್ರಕ್ಕೆ ವಿಶಿಷ್ಠ ಕೊಡುಗೆ, ಸಾಧನೆ ನೀಡುವಂತೆ ಆಚರಿಸುವಂತಾಗಲಿ ಎಂದು ಆಶಿಸಿದರು. ಗದಗ ಐಎಂಎ ನೂತನ ಅಧ್ಯಕ್ಷ ಡಾ. ಶ್ರೀಧರ ವ್ಹಿ.ಕುರಡಗಿ ಹಾಗೂ ಮಹಿಳಾ ಘಟಕದ ಅಧ್ಯಕ್ಷೆ ಡಾ. ಸುನೀತಾ ಎಸ್.ಕುರಡಗಿ ಮಾತನಾಡಿ, ಐಎಂಎ ಗದಗ ಶಾಖೆಯ ಶತಮಾನೋತ್ಸವ ವರ್ಷಾಚರಣೆಯನ್ನು ವೈವಿಧ್ಯಮಯ ಕಾರ್ಯಕ್ರಮಗಳನ್ನು ರೂಪಿಸಿ, ಸರ್ವರ ಸಹಕಾರದೊಂದಿಗೆ ಯಶಸ್ವಿಗೊಳಿಸುವದಾಗಿ ಹೇಳಿದರು.

ವೇದಿಕೆಯ ಮೇಲೆ ಐಎಂಎ ರಾಷ್ಟ್ರೀಯ ಉಪಾಧ್ಯಕ್ಷ ಡಾ. ಜಿ.ಬಿ. ಬಿಡಿನಹಾಳ, ಕಾರ್ಯದರ್ಶಿ ಡಾ. ರಾಹುಲ್ ಶಿರೋಳ, ಖಜಾಂಚಿ ಡಾ. ಜಯರಾಜ ಪಾಟೀಲ, ಕಾರ್ಯದರ್ಶಿ ಡಾ. ಸಪನಾ ಜೋಷಿ, ಖಜಾಂಚಿ ಡಾ. ಜ್ಯೋತಿ ಪಾಟೀಲ ಉಪಸ್ಥಿತರಿದ್ದರು. ಡಾ. ಪವನ ಪಾಟೀಲ ಸ್ವಾಗತಿಸಿದರು. ಡಾ. ತುಕಾರಾಮ ಸೋರಿ ವರದಿ ವಾಚಿಸಿದರು, ಡಾ. ಶ್ರುತಿ ಪಾಟೀಲ ಹಾಗೂ ಡಾ. ಅರವಿಂದ ಕರಿನಾಗಣ್ಣವರ ನಿರೂಪಿಸಿದರು. ಕಾರ್ಯದರ್ಶಿ ಡಾ. ರಾಹುಲ್ ಶಿರೋಳ ವಂದಿಸಿದರು. ಸಮಾರಂಭದಲ್ಲಿ ಗದಗ ಐಎಂಎ ಸದಸ್ಯರು, ಗಣ್ಯರು ಪಾಲ್ಗೊಂಡಿದ್ದರು.

# ಹಬ್ಬದ ಪ್ರಯುಕ್ತ ಹೆಚ್ಚುವರಿ ಸಾರಿಗೆ



■ **ವಿಜಯಸಾಕ್ಷಿ ಸುದ್ದಿ, ಗದಗ**

ಪ್ರಸಕ್ತ ಸಾಲಿನ ದೀಪಾವಳಿ ಹಬ್ಬದ ಪ್ರಯುಕ್ತ ಸಾರ್ವಜನಿಕರು ತಮ್ಮ ಸ್ವಂತ ಊರುಗಳಿಗೆ ತೆರಳುವುದರಿಂದ ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ ವ್ಯಾಪ್ತಿಯ ಹುಬ್ಬಳ್ಳಿ, ಧಾರವಾಡ, ಗದಗ, ಬೆಳಗಾವಿ, ಉತ್ತರ ಕನ್ನಡ, ಹಾವೇರಿ, ಚಿಕ್ಕೋಡಿ ಮತ್ತು ಬಾಗಲಕೋಟೆ ವಿಭಾಗಗಳಿಂದ ಸುಮಾರು 310 ಹೆಚ್ಚುವರಿ ವಿಶೇಷ ಸಾರಿಗೆಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿದೆ.

ಅ.20 ಮತ್ತು 22ರಂದು ಕ್ರಮವಾಗಿ ನರಕ ಚತುರ್ದಶಿ ಹಾಗೂ ದೀಪಾವಳಿ ಹಬ್ಬದ ಅಂಗವಾಗಿ ಸರ್ಕಾರಿ ರಜೆ ಹಾಗೂ ಅ. 18 ಹಾಗೂ 19ರಂದು ವಾರಾಂತ್ಯ ದಿನಗಳಾಗಿದ್ದರಿಂದ ಬೆಂಗಳೂರು ಮತ್ತು ಇತರೇ ಪ್ರಮುಖ ಸ್ಥಳಗಳಿಂದ ಹೆಚ್ಚಿನ ಪ್ರಯಾಣಿಕರು ತಮ್ಮ ಊರುಗಳಿಗೆ ತೆರಳಲು ಹೆಚ್ಚುವರಿ ಸಾರಿಗೆಗಳನ್ನು ಕಾರ್ಯಾಚರಣೆ ಮಾಡಲಾಗುವುದು.

ಬೆಂಗಳೂರಿನಿಂದ ರಾಜ್ಯ/ಅಂತರರಾಜ್ಯದ ವಿವಿಧ ಸ್ಥಳಗಳಿಗೆ ತೆರಳಲು ಅ. 17-19ರಂದು ಹೆಚ್ಚುವರಿ ವಿಶೇಷ ಸಾರಿಗೆ ಸೌಲಭ್ಯವನ್ನು ಕಲ್ಪಿಸಲಾಗಿದೆ. ಹಬ್ಬ ಮುಗಿದ ನಂತರ ಅ. 22 ಮತ್ತು ನಂತರದ ದಿನಗಳಂದು ಪ್ರಮುಖ ಸ್ಥಳಗಳಿಗೆ ಜನದಟ್ಟಣೆಗೆ ಅನುಗುಣವಾಗಿ ಹೆಚ್ಚುವರಿ ಸಾರಿಗೆಗಳನ್ನು ಕಾರ್ಯಾಚರಣೆಗೊಳಿಸಲಾಗುವುದು.

ಹೆಚ್ಚುವರಿ ಸಾರಿಗೆಗಳ ಸದುಪಯೋಗ ಪಡಿಸಿಕೊಳ್ಳುವದರೊಂದಿಗೆ, ಸುಖಕರ ಹಾಗೂ ಸುರಕ್ಷಿತ ಪ್ರಯಾಣಕ್ಕಾಗಿ ಸಂಸ್ಥೆಯ ಬಸ್‌ಗಳಲ್ಲಿ ಪ್ರಯಾಣಿಸುವಂತೆ ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ಪ್ರಕಟಣೆಯಲ್ಲಿ ತಿಳಿಸಿದೆ.

### 'ವಿಕಸಿತ ಕೃಷಿ ಸಂಕಲ್ಪ ಅಭಿಯಾನ'ದ ಕುರಿತು ಒಂದು ದಿನದ ಸಂವಾದ ಕಾರ್ಯಕ್ರಮ

# ರೈತರು ಅಂತರ್ಜಲದ ಪ್ರಾಥಮಿಕ ಗ್ರಾಹಕರು



■ **ವಿಜಯಸಾಕ್ಷಿ ಸುದ್ದಿ, ಗದಗ**

ಭಾರತ ಸರಕಾರದ ಜಲ ಶಕ್ತಿ ಸಚಿವಾಲಯದ ಅಡಿಯಲ್ಲಿನ ಕೇಂದ್ರೀಯ ಅಂತರ್ಜಲ ಮಂಡಳಿ ಹಾಗೂ ಐ.ಸಿ.ಎ.ಆರ್-ಕೆ.ಎಚ್.ಪಾಟೀಲ ಕೃಷಿ ವಿಜ್ಞಾನ ಕೇಂದ್ರ ಹುಲಕೋಟಿ ಇವರ ಸಂಯುಕ್ತಾಶ್ರಯದಲ್ಲಿ 'ವಿಕಸಿತ ಕೃಷಿ ಸಂಕಲ್ಪ ಅಭಿಯಾನ'ದ ಕುರಿತು ಒಂದು ದಿನದ ಸಾರ್ವಜನಿಕ ಸಂವಹನ ಕಾರ್ಯಕ್ರಮವನ್ನು ಕೃಷಿ ವಿಜ್ಞಾನ ಕೇಂದ್ರ, ಹುಲಕೋಟಿಯಲ್ಲಿ ಹಮ್ಮಿಕೊಳ್ಳಲಾಗಿತ್ತು.

ಕಾರ್ಯಕ್ರಮವನ್ನು ಸಿ.ಜಿ.ಡಬ್ಲ್ಯೂ.ಬಿ. ನೈರುತ್ಯ ವಲಯದ ಪ್ರಾದೇಶಿಕ ನಿರ್ದೇಶಕ ಜಿ. ಕೃಷ್ಣಮೂರ್ತಿ, ವಿಜ್ಞಾನಿಗಳಾದ ಎಚ್.ಪಿ. ಜಯಪ್ರಕಾಶ್, ಡಾ. ಜೆ. ದೇವಿತುರಾಜ್ ಮತ್ತು ಸಂಗೀತಾ ಪಿ.ಭಟ್ಟಾಚಾರ್ಜಿ ಇವರ ಉಪಸ್ಥಿತಿಯಲ್ಲಿ ಉದ್ಘಾಟಿಸಿದರು.

ಐ.ಸಿ.ಎ.ಆರ್-ಕೆ.ಎಚ್.ಪಾಟೀಲ ಕೃಷಿ ವಿಜ್ಞಾನ ಕೇಂದ್ರದ ಹಿರಿಯ ವಿಜ್ಞಾನಿಗಳು ಹಾಗೂ ಮುಖ್ಯಸ್ಥರಾದ ಡಾ. ಸುಧಾ ವಿ.ಮಂಕಣಿ ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದರು. ಗೌರವ ಅತಿಥಿಯಾಗಿ ತೋಂಟದಾರ್ಯ ಇಂಜಿನಿಯರಿಂಗ್ ಕಾಲೇಜಿನ ಸಿವಿಲ್ ಇಂಜಿನಿಯರಿಂಗ್ ವಿಭಾಗದ ಪ್ರಾಧ್ಯಾಪಕರು ಮತ್ತು ಮುಖ್ಯಸ್ಥರಾದ ಡಾ. ಲೋಕೇಶ್ ಭಾಗವಹಿಸಿದ್ದರು.

ಕೇಂದ್ರೀಯ ಅಂತರ್ಜಲ ಮಂಡಳಿ, ನೈರುತ್ಯ ವಲಯದ ವಿಜ್ಞಾನಿ ಹೆಚ್.ಪಿ. ಜಯಪ್ರಕಾಶ್ ಮಾತನಾಡಿ, ದೇಶದ ಆರ್ಥಿಕತೆಯನ್ನು ರೂಪಿಸುವಲ್ಲಿ ರೈತರ ಪ್ರಮುಖವಾಗಿದೆ. ರೈತರು ಅಂತರ್ಜಲದ ಪ್ರಾಥಮಿಕ ಗ್ರಾಹಕರಲ್ಲದೇ, ಅವರಿಗೆ ಸರಿಯಾದ ವೈಜ್ಞಾನಿಕ ಮಾರ್ಗದರ್ಶನ ನೀಡಿದರೆ ಜಲ ಸಂಪನ್ಮೂಲವನ್ನು ಪರಿಣಾಮಕಾರಿಯಾಗಿ ನಿರ್ವಹಿಸುವ ಸಾಮರ್ಥ್ಯವನ್ನು ಹೊಂದಿದ್ದಾರೆ. ಸುಸ್ಥಿರ ಅಂತರ್ಜಲ ನಿರ್ವಹಣೆಯಾಗಬೇಕಾದರೆ, ರೈತರಿಗೆ ಅಂತರ್ಜಲದ ಪ್ರಾಮುಖ್ಯತೆಯ ಕುರಿತು ತರಬೇತಿಗಳು ಮತ್ತು ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವ ಅಗತ್ಯವಿದೆ ಎಂದು ತಿಳಿಸಿದರು.

ಕೇಂದ್ರೀಯ ಅಂತರ್ಜಲ ಮಂಡಳಿ, ನೈರುತ್ಯ ವಲಯದ ನಿರ್ದೇಶಕರಾದ ಜಿ. ಕೃಷ್ಣಮೂರ್ತಿ ಮಾತನಾಡಿ, ನಮ್ಮ ದೇಶದಲ್ಲಿ ನೀರಿನ ಸುರಕ್ಷತೆಯನ್ನು ಖಚಿತಪಡಿಸಿಕೊಳ್ಳಲು ಜಲ ಸಂಪನ್ಮೂಲದ ಮೌಲ್ಯಮಾಪನ, ಸಂರಕ್ಷಣೆ ಮತ್ತು ಸುಸ್ಥಿರ ಅಭಿವೃದ್ಧಿಯ ಮೇಲೆ ಕೇಂದ್ರೀಕರಿಸುವ ಮೂಲಕ ವೈಜ್ಞಾನಿಕ ಅಂತರ್ಜಲ ನಿರ್ವಹಣೆಗೆ ಮಂಡಳಿಯ ಬದ್ಧತೆಯನ್ನು ತಿಳಿಸಿದರಲ್ಲದೆ, ರಾಷ್ಟ್ರೀಯ ಜಲಚರ ನಕ್ಷೆ ಮತ್ತು ನಿರ್ವಹಣಾ ಕಾರ್ಯಕ್ರಮದ ಅಡಿಯಲ್ಲಿನ ಉಪಕ್ರಮಗಳನ್ನು ವಿವರಿಸಿದರು.

ಡಾ. ಲೋಕೇಶ್ ಐ.ಒ.ಟಿ. ಮತ್ತು ಸೆನ್ಸರ್ ಆಧಾರಿತ ಕೃಷಿ ಉಪಕರಣಗಳ ಕ್ಷೇತ್ರದಲ್ಲಿನ ಇತ್ತೀಚಿನ ಪ್ರಗತಿಗಳ ಬಗ್ಗೆ ಮಾಹಿತಿ ನೀಡಿ, ಇದನ್ನು ಗ್ರಾಮ ಮಟ್ಟದಲ್ಲಿ ಪರಿಚಯಿಸಿದರೆ ಯುವ ರೈತರು ಪರಿಣಾಮಕಾರಿಯಾಗಿ ಬಳಸಿಕೊಳ್ಳಬಹುದು ಎಂದು ಹೇಳಿದರು.

ಗದಗ ಜಿಲ್ಲೆಯಲ್ಲಿ ಓಂಕಿಗಖಚಒ ಅಧ್ಯಯನಗಳು, ಜಲ ಸಂಪನ್ಮೂಲಗಳ ಸಂರಕ್ಷಣೆ, ಕೃಷಿ ವಲಯದಲ್ಲಿ ಅಭಿವೃದ್ಧಿ ಮತ್ತು ನೀರಿನ ಸರಿಯಾದ ಬಳಕೆ ಮತ್ತು ಅಂತರ್ಜಲ ಮರುಪೂರಣಕ್ಕಾಗಿ ತಂತ್ರಜ್ಞಾನಗಳಂತಹ ವಿವಿಧ ವಿಷಯಗಳ ಕುರಿತು ಎಚ್.ಪಿ. ಜಯಪ್ರಕಾಶ್, ಪ್ರೊ. ಲೋಕೇಶ್ ಮತ್ತು ಎನ್.ಎಚ್. ಭಂಡಿ ಇವರು ತಾಂತ್ರಿಕ ಉಪನ್ಯಾಸಗಳನ್ನು ನೀಡಿದರು.

ಡಾ. ಸುಧಾ ವಿ.ಮಂಕಣಿ ಮಾತನಾಡಿ, ಗದಗ ಜಿಲ್ಲೆಯ ಅಂತರ್ಜಲ ನಿರ್ವಹಣೆ ಕ್ಷೇತ್ರದಲ್ಲಿ ಹುಲಕೋಟಿ ಕೃಷಿ ವಿಜ್ಞಾನ ಕೇಂದ್ರದ ಪಾತ್ರವನ್ನು ವಿವರಿಸಿ, ಕೃಷಿ ವಿಜ್ಞಾನ ಕೇಂದ್ರವು ರೈತರ ತರಬೇತಿಗಳ ಮೂಲಕ ನೀರಿನ ಸದ್ಬಳಕೆ ಕುರಿತು ಜಾಗೃತಿ ಮೂಡಿಸುತ್ತಿದೆ ಎಂದರಲ್ಲದೆ, ಈ ನಿಟ್ಟಿನಲ್ಲಿ ವಿವಿಧ ಕಾರ್ಯಕ್ರಮಗಳನ್ನು ಆಯೋಜಿಸಿದ್ದಕ್ಕಾಗಿ ಕೇಂದ್ರ ಅಂತರ್ಜಲ ಮಂಡಳಿಯ ಪ್ರಯತ್ನಗಳನ್ನು ಶ್ಲಾಘಿಸಿದರು.

# ಕಾನೂನು ನೆರವು ಅಭಿರಕ್ಷಕರ ಕಚೇರಿಯಲ್ಲಿ ವಿವಿಧ ಹುದ್ದೆಗಳಿಗೆ ಅರ್ಜಿ ಆಹ್ವಾನ

■ **ವಿಜಯಸಾಕ್ಷಿ ಸುದ್ದಿ, ಗದಗ**

ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ ಬೆಂಗಳೂರು ಇವರ ನಿರ್ದೇಶನದ ಮೇರೆಗೆ, ಗದಗ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಡಿಯಲ್ಲಿ ಸ್ಥಾಪಿಸಿದ ಕಾನೂನು ನೆರವು ಅಭಿರಕ್ಷಕರ ಕಛೇರಿಯಲ್ಲಿ ಖಾಲಿ ಇರುವ ಉಪ ಕಾನೂನು ನೆರವು ಅಭಿರಕ್ಷಕರ 3 ಹುದ್ದೆ (Deputy Chief Legal Aid Defense Counsel) ಹುದ್ದೆಗಳನ್ನು ಗುತ್ತಿಗೆ ಆಧಾರದ ಮೇಲೆ ಭರ್ತಿ ಮಾಡಲು ಅರ್ಜಿ ಆಹ್ವಾನಿಸಲಾಗಿದೆ. 7 ವರ್ಷ ವಕೀಲಿ ವೃತ್ತಿಯ ಅನುಭವವಿರುವ ಅರ್ಹ ವಕೀಲರು ನಿಗದಿತ ನಮೂನೆಯಲ್ಲಿ ಸೂಕ್ತ ದಾಖಲೆಗಳೊಂದಿಗೆ ಅರ್ಜಿ ಸಲ್ಲಿಸಬಹುದಾಗಿದೆ. ಆಯ್ಕೆಯಾದ ವಕೀಲರು ತಮ್ಮ ಸ್ವಂತ ಪ್ರಕರಣಗಳನ್ನು ನಡೆಸುವಂತಿಲ್ಲ.

ಪದವಿ ಹೊಂದಿದ, ಕನ್ನಡ ಹಾಗೂ ಇಂಗ್ಲೀಷ್ ಬೆರಳಚ್ಚು ಹಾಗೂ ಕಂಪ್ಯೂಟರ್ ಜ್ಞಾನವುಳ್ಳ ಅಭ್ಯರ್ಥಿಗಳಿಗೆ ಕಚೇರಿ ಸಹಾಯಕ/ಗುಮಾಸ್ತ (Office Assistants/Clerk) 1 ಹುದ್ದೆ ಮತ್ತು ಎಸ್‌ಎಸ್‌ಎಲ್‌ಸಿ ಉತ್ತೀರ್ಣರಾದವರಿಗೆ ದಲಾಯತ್ (Office Peon) 1 ಹುದ್ದೆಗಳನ್ನು ಗುತ್ತಿಗೆ ಆಧಾರದ ಮೇಲೆ ಭರ್ತಿ ಮಾಡಿಕೊಳ್ಳಲು ಅರ್ಜಿ ಆಹ್ವಾನಿಸಲಾಗಿದೆ. ಸೇವೆ ಸಲ್ಲಿಸಲು ಇಚ್ಛಿಸುವ ಆಸಕ್ತರು ಅಭ್ಯರ್ಥಿಗಳು ಗದಗ ಜಿಲ್ಲಾ ನ್ಯಾಯಾಲಯ ವೆಬ್‌ಸೈಟ್ ಮೂಲಕ ಅರ್ಜಿಯನ್ನು ಪಡೆದುಕೊಂಡು, ಭರ್ತಿ ಮಾಡಿ ಅವಶ್ಯಕ ದಾಖಲೆಗಳನ್ನು ಸ್ವತಃ ದೃಢೀಕರಿಸಿ ಲಗತ್ತಿಸಿ ನೋಂದಾಯಿತ ಅಂಚೆ ಮೂಲಕ ಅಥವಾ ಮುಚ್ಚಿದ ಲಕೋಟೆಯಲ್ಲಿ ಖುದ್ದಾಗಿ 25-10-2025ರ ಸಂಜೆ 5 ಗಂಟೆಯ ಒಳಗಾಗಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ನ್ಯಾಯಾಲಯದ ಸಂಕೀರ್ಣ, ಗದಗ ಕಚೇರಿಗೆ ಅರ್ಜಿಗಳನ್ನು ಸಲ್ಲಿಸಬಹುದಾಗಿದೆ. ನಂತರ ಬಂದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.

ಹುದ್ದೆಗೆ ನಿಗದಿಪಡಿಸಿದ ವಿದ್ಯಾರ್ಹತೆ, ಸೇವಾನುಭವ ಹಾಗೂ ಇನ್ನಿತರ ಮಾಹಿತಿಗಾಗಿ ಗದಗ ಜಿಲ್ಲಾ ನ್ಯಾಯಾಲಯದ ವೆಬ್‌ಸೈಟ್: https://gadag.dcourts.gov.in ಮೂಲಕ ಅಥವಾ ಗದಗ ಜಿಲ್ಲಾ ನ್ಯಾಯಾಲಯದ ಆವರಣದಲ್ಲಿರುವ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಕಚೇರಿಯನ್ನು ಸಂಪರ್ಕಿಸುವಂತೆ ಪ್ರಕಟಣೆಯಲ್ಲಿ ತಿಳಿಸಲಾಗಿದೆ.

## ಗಾಝಾ ಕದನ ವಿರಾಮ ಜಾರಿಯಾದರೂ ಆಕ್ರಮಣ ಮುಂದುವರಿಸಿದ ಇಸ್ರೇಲ್ : ಪ್ಯಾಲೆಸ್ತೀನಿಯರ ಹತ್ಯೆ, ಬಂಧನ

■ **ವಿಜಯಸಾಕ್ಷಿ ಸುದ್ದಿ, ಗಾಝಾ**

ಗಾಝಾದಲ್ಲಿ ಕದನ ವಿರಾಮ ಜಾರಿಯಾಗಿದೆ ಎಂದು ಇಡೀ ಜಗತ್ತು ಮಾತನಾಡಿಕೊಳ್ಳುತ್ತಿದೆ. ತಾನೇ ಬಾಂಬ್ ಕೊಟ್ಟು ಕಂದಮ್ಮಗಳ ಸಾವಿಗೆ ಕಾರಣರಾದ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್, ಈಗ ಯುದ್ಧ ನಿಲ್ಲಿಸಿದ ಶಾಂತಿಯ ರಾಯಭಾರಿಯಾಗಿ ಹೊರ ಹೊಮ್ಮಿದ್ದಾರೆ. ಮುಂದೆ ನಿಂತು ಕಂದಮ್ಮಗಳ ರಕ್ತ ಹರಿಸಿದ ಇಸ್ರೇಲ್ ಅಧ್ಯಕ್ಷ ನೆತನ್ಯಾಹು ನಿರಪರಾಧಿ ಎಂಬಂತೆ ಜಾಗತಿಕ ನಾಯಕರು ಕೈ ಕುಲುಕುತ್ತಿದ್ದಾರೆ.

ಈ ನಡುವೆ ಕದನ ವಿರಾಮದಿಂದ ಪ್ಯಾಲೆಸ್ತೀನಿಯರಿಗೆ ಕನಿಷ್ಠ ಬದುಕುವ ಅವಕಾಶ ಸಿಕ್ಕಿತಾ? ಎಂದು ನೋಡಿದರೆ, ಇಲ್ಲ ಎನ್ನುತ್ತವೆ ವರದಿಗಳು.

# ಕನ್ನೇರಿ ಶ್ರೀಗಳ ವಿರುದ್ಧ ಪ್ರತಿಭಟನಾ ಸಭೆ



■ **ವಿಜಯಸಾಕ್ಷಿ ಸುದ್ದಿ, ಗದಗ**

ಇತ್ತೀಚೆಗೆ ಮಹಾರಾಷ್ಟ್ರದ ಜತ್ತ ತಾಲೂಕಿನ ಬೀಳೂರ ವಿರಕ್ತಮಠದ ಕಾರ್ಯಕ್ರಮದಲ್ಲಿ, ಕನ್ನೇರಿಯ ಶ್ರೀ ಅದೃಶ್ಯ ಕಾಡಸಿದ್ಧೇಶ್ವರ ಸ್ವಾಮಿಗಳು, ಬಸವ ಸಂಸ್ಕೃತಿ ಅಭಿಯಾನದಲ್ಲಿ ಭಾಗವಹಿಸಿದ ಎಲ್ಲ ಪೂಜ್ಯರನ್ನು ಹಾಗೂ ಬಸವಭಕ್ತರನ್ನು ಕುರಿತು ಅತ್ಯಂತ ಕೀಳುಮಟ್ಟದಲ್ಲಿ ಅವಮಾನಿಸಿದ್ದು, ಅವರ ಈ ಅಸಂವಿಧಾನಾತ್ಮಕ ಉದ್ಧಟ ನಿಲುವನ್ನು ಖಂಡಿಸಿ ಅ. 17ರಂದು ಮುಂಜಾನೆ 9.30 ಗಂಟೆಗೆ ಗದುಗಿನ ಗಾಂಧಿ ವೃತ್ತದಲ್ಲಿ ಪ್ರತಿಭಟನಾ ಸಭೆಯನ್ನು ಆಯೋಜಿಸಿದೆ.

ಇದರಲ್ಲಿ ಜಾಗತಿಕ ಲಿಂಗಾಯತ ಮಹಾಸಭಾ, ಲಿಂಗಾಯತ ಪ್ರಗತಿಶೀಲ ಸಂಘ, ದಲಿತ ಸಂಘಟನೆಗಳು, ಬಸವದಳ, ಬಸವಕೇಂದ್ರ, ತೋಂಟದಾರ್ಯ ಜಾತ್ರಾ ಮಹೋತ್ಸವ ಸಮಿತಿ, ಶರಣಸಾಹಿತ್ಯ ಪರಿಷತ್ತು, ಕದಲಿ ಮಹಿಳಾ ವೇದಿಕೆಗಳು ಭಾಗವಹಿಸಲಿದ್ದು, ಪ್ರತಿಭಟನಾ ಸಭೆಯ ನಂತರ ಅದೃಶ್ಯ ಕಾಡಸಿದ್ಧೇಶ್ವರ ಶ್ರೀಗಳನ್ನು ಜಿಲ್ಲೆಗೆ ಬಾರದಂತೆ ನಿರ್ಬಂಧ ವಿಧಿಸಲು ಮತ್ತು ಸದರಿ ಶ್ರೀಗಳ ಮೇಲೆ ಕಾನೂನಾತ್ಮಕ ಕ್ರಮ ಕೈಗೊಳ್ಳಲು ಸರಕಾರವನ್ನು ಒತ್ತಾಯಿಸಲು ಜಿಲ್ಲಾಧಿಕಾರಿಗಳ ಮುಖಾಂತರ ಮನವಿಯನ್ನು ಸಲ್ಲಿಸಲಾಗುವುದು.

ಈ ಪ್ರತಿಭಟನೆಯಲ್ಲಿ ಬಸವಾಭಿಮಾನಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕೆಂದು ಸಮಸ್ತ ಬಸವಪರ ಸಂಘಟನೆಗಳ ಸರ್ವ ಪದಾಧಿಕಾರಿಗಳು ಪ್ರಕಟಣೆಯಲ್ಲಿ ವಿನಂತಿಸಿದ್ದಾರೆ.

# ನಶಾ ಮುಕ್ತ ಭಾರತ-ಚಿತ್ರಕಲಾ ಸ್ಪರ್ಧೆ




■ **ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ**

ನಗರದ ಶ್ರೀ ವಿಜಯ ಮಹಾಂತೇಶ ಲಲಿತ ಕಲಾ ಮಹಾವಿದ್ಯಾಲಯದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ ಧಾರವಾಡ, ವಿಕಲಚೇತನ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಧಾರವಾಡ, ತಾಲೂಕು ಪಂಚಾಯಿತಿ ಹುಬ್ಬಳ್ಳಿ ಹಾಗೂ ಶ್ರೀ ಮೈತ್ರಿ ಸಮಗ್ರ ವ್ಯಸನಮುಕ್ತ ಪುನರ್ವಸತಿ ಕೇಂದ್ರ ಹುಬ್ಬಳ್ಳಿ ಇವುಗಳ ಸಂಯುಕ್ತಾಶ್ರಯದಲ್ಲಿ ನಶಾ ಮುಕ್ತ ಭಾರತ ಅಭಿಯಾನದ ಅಂಗವಾಗಿ ಚಿತ್ರಕಲಾ ಸ್ಪರ್ಧೆಯನ್ನು ಆಯೋಜಿಸಲಾಗಿತ್ತು.

ಕಾರ್ಯಕ್ರಮದಲ್ಲಿ ಆರೋಗ್ಯ ಇಲಾಖೆಯ ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಡಾ. ಜಿ.ವಿ. ಓಂಕಾರಿಗೌಡ್ರ ಮಾತನಾಡಿ, ಸದೃಢ ದೇಶ ಕಟ್ಟಲು ಯುವಕರ ಕೊಡುಗೆ ಅವಶ್ಯಕವಾಗಿದೆ. ಆದರೆ ಯುವಕರು ಮಾದಕ ವಸ್ತುಗಳಿಗೆ ದಾಸರಾಗಿ ಹಲವಾರು ರೋಗಗಳಿಗೆ ತುತ್ತಾಗುತ್ತಿದ್ದಾರೆ. ಕಾರಣ ಇಂತಹ ವ್ಯಸನಗಳಿಂದ ದೂರವಿದ್ದು, ಆರೋಗ್ಯವಂತರಾಗಿ ಉತ್ತಮ ಜೀವನ ರೂಪಿಸಿಕೊಳ್ಳಲು ಮುಂದಾಗಬೇಕು ಎಂದು ತಿಳಿಸಿದರು.

ಮಹಾವಿದ್ಯಾಲಯದ ಪ್ರಾಚಾರ್ಯ ಆರ್.ಎಫ್. ಹಿರೇಗೌಡರ ಮಾತನಾಡಿ, ಯುವ ಪೀಳಿಗೆ ಮಾರಕ ದುಶ್ಚಟಗಳಿಗೆ ದಾಸರಾಗದೇ, ನಶಾ ವಸ್ತುಗಳಿಂದ ದೂರವಿದ್ದು, ಸದೃಢವಂತರಾಗಬೇಕೆಂದು ತಿಳಿಸಿದರು. ಮೈತ್ರಿ ಸಂಸ್ಥೆಯ ಮಂಜುನಾಥ ಮುದಿಗೌಡ್ರ, ಶಿವಾನಂದ ಚೌಗಲೆ, ಕಲ್ಮೇಶ್ ಬೆಳೆಬಾಳ ವಿದ್ಯಾರ್ಥಿಗಳಲ್ಲಿ ಅರಿವು ಮೂಡಿಸಿದರು.

ಕಾರ್ಯಕ್ರಮದಲ್ಲಿ ರಂಜಿತಾ, ಶರಾವತಿ, ಕಾಲೇಜಿನ ಸಿಬ್ಬಂದಿ ಹಾಗೂ ಆರೋಗ್ಯ ಇಲಾಖೆ ಸಿಬ್ಬಂದಿ, ವಿಕಲಚೇತನ ಗ್ರಾಮೀಣ ಪುನರವಸತಿ ಕಾರ್ಯಕರ್ತರು ಹಾಜರಿದ್ದರು. ಸಹ ಪ್ರಾಧ್ಯಾಪಕರಾದ ಸಿ.ಡಿ. ಜಟ್ಟೆನವರ ನಿರೂಪಿಸಿದರು. ಎಂ.ಆರ್.ಡಬ್ಲ್ಯೂ ಮಹಾಂತೇಶ ಕುರ್ತಕೋಟಿ ವಂದಿಸಿದರು.

# ಹೆಸರು ನೋಂದಣಿಗೆ ಅರ್ಜಿ ಸಲ್ಲಿಸಿ

■ **ವಿಜಯಸಾಕ್ಷಿ ಸುದ್ದಿ, ಗದಗ**

ಮತದಾರರ ನೋಂದಣಿ ನಿಯಮಗಳು 1960ರ 31 (4)ನೇ ನಿಯಮದ ಅನುಸಾರ ಸಂಬಂಧಿಸಿದ ಪದವೀಧರ ಮತಕ್ಷೇತ್ರದ ಮತದಾರರ ಪಟ್ಟಿಯಲ್ಲಿ ನೋಂದಾಯಿಸಿಕೊಳ್ಳಲು ಅರ್ಹ ಪ್ರತಿಯೊಬ್ಬ ವ್ಯಕ್ತಿಯು ಮತದಾರರ ನೋಂದಣಿ ನಿಯಮ 1960ರನ್ವಯ ಮತ್ತು ದಿನಪತ್ರಿಕೆಯಲ್ಲಿ ಪ್ರಕಟಿಸಲಾದ ಎರಡನೇ ಅನುಸೂಚಿಯಲ್ಲಿ ಪುನರುದ್ಧರಿಸಿರುವ ನಮೂನೆ-18ರಲ್ಲಿ ಅರ್ಜಿಯನ್ನು ನವೆಂಬರ್ 6, 2025 ಅಥವಾ ಅದಕ್ಕೂ ಮೊದಲು ಮತದಾರರ ನೋಂದಣಾಧಿಕಾರಿಗಳ/ ಸಂಬಂಧ ಪಟ್ಟ ಸಹಾಯಕ ಮತದಾರರ ನೋಂದಣಾಧಿಕಾರಿಗಳ/ ನಿಯೋಜಿತ ಅಧಿಕಾರಿಗಳ ಕಚೇರಿಗೆ ಕಳುಹಿಸಲು ಕರೆ ನೀಡಲಾಗಿದೆ.

ಪದವೀಧರ ವ್ಯಕ್ತಿಯು ತಮ್ಮ ಹೆಸರನ್ನು ಇದುವರೆಗೂ ಸೇರಿಸದೇ ಇದ್ದಲ್ಲಿ ನಿಗದಿತ ನಮೂನೆ-18ರಲ್ಲಿ ನವೆಂಬರ್ 6ರೊಳಗೆ ಸಲ್ಲಿಸಬಹುದಾಗಿದೆ. ಹೆಚ್ಚಿನ ವಿವರಗಳು ಮುಖ್ಯ ಚುನಾವಣಾಧಿಕಾರಿ, ಕರ್ನಾಟಕ ಇವರ ವೆಬ್‌ಸೈಟ್ ವಿಳಾಸ www.ceokarnataka.kar.nic.in ಇಲ್ಲಿ ಲಭ್ಯವಿದೆ ಎಂದು ಕರ್ನಾಟಕ ಪಶ್ಚಿಮ ಪದವೀಧರರ ಮತಕ್ಷೇತ್ರ ಮತದಾರರ ನೋಂದಣಾಧಿಕಾರಿಗಳು ಹಾಗೂ ಪ್ರಾದೇಶಿಕ ಆಯುಕ್ತರು, ಬೆಳಗಾವಿ ವಿಭಾಗ, ಬೆಳಗಾವಿ ಇವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka